◆ ADVT ◆
ಇಲ್ಲಿ ಜಾಹೀರಾತು
98700 06472 · need24.digital

NEED24 NEWS
हर ख़बर, हर शहर

ನೀಡ್ 24 ನ್ಯೂಸ್

ಪ್ರತಿ ಸುದ್ದಿ, ಪ್ರತಿ ನಗರ

◆ ADVT ◆
ಇಲ್ಲಿ ಜಾಹೀರಾತು
98700 06472 · need24.digital

DIGITAL E-PAPER

PRGI APPLICATION UNDER PROCESS
Application No. T/GJ/2026/0619/2304/1577

GST
GSTIN 24CINPG0564Q1ZT

UDYAM REGISTERED
UDYAM-GJ-14-0003714

◆ DIGITAL NEWS NETWORK ◆
ಭಾರತದ ವಿಶ್ವಾಸಾರ್ಹ ಬಹುಭಾಷಾ ಡಿಜಿಟಲ್ ನ್ಯೂಸ್ ನೆಟ್‌ವರ್ಕ್
11+ Languages | 24×7 Live | e-Paper Daily

ನಮ್ಮ App ಡೌನ್‌ಲೋಡ್ ಮಾಡಿ
Download on the App Store
GET IT ON Google Play

www.need24.digital
info@need24.in
+91 98700 06472
FOLLOW US:

तेज़ | सटीक | निष्पक्ष | जनहित में | सच की आवाज़ | जन-जन की आवाज़ | निडर पत्रकारिता

ನ. 22ರೊಳಗೆ ಕಾಲುವೆಗೆ ನೀರು ಹರಿಸದಿದ್ದರೆ ರಾಯಚೂರು ಜಿಲ್ಲಾ ಬಂದ್: ರೈತ ಸಂಘದ ಎಚ್ಚರಿಕೆ



ದೇವದುರ್ಗ ಬ್ರೇಕಿಂಗ್ ನ್ಯೂಸ್

ನ. 22ರೊಳಗೆ ಕಾಲುವೆಗೆ ನೀರು ಹರಿಸದಿದ್ದರೆ ರಾಯಚೂರು ಜಿಲ್ಲಾ ಬಂದ್: ರೈತ ಸಂಘದ ಎಚ್ಚರಿಕೆ

ನೀರು ಬಿಡದಿದ್ದರೆ ರಾಜ್ಯ ಹೆದ್ದಾರಿಯಲ್ಲಿ ಅಹೋರಾತ್ರಿ ಧರಣಿ; ಗೋಲಿಬಾರ್‌ಗೂ ಹೆದರುವುದಿಲ್ಲ ಎಂದ ಪ್ರಭಾಕರ ಪಾಟೀಲ ಇಂಗಳದಾಳ

ದೇವದುರ್ಗ: ನವೆಂಬರ್ 22ರೊಳಗೆ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸದಿದ್ದರೆ ರಾಯಚೂರು ಜಿಲ್ಲೆ ಬಂದ್ ಮಾಡಿ ಉಗ್ರ ಹೋರಾಟ ನಡೆಸಲಾಗುವುದು. ಸರ್ಕಾರ ಗೋಲಿಬಾರ್ ನಡೆಸಿದರೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ, ರಾಜ್ಯ ಹೆದ್ದಾರಿಯ ಮೇಲೆಯೇ ವಾಸ್ತವ್ಯ ಹೂಡಿ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ ಇಂಗಳದಾಳ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಭಾಗದ ರೈತರು ಎದುರಿಸುತ್ತಿರುವ ನೀರಿನ ಸಮಸ್ಯೆ ಹಾಗೂ ಸರ್ಕಾರದ ನಿರ್ಲಕ್ಷ್ಯದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ಕೈಕೊಟ್ಟಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆಯ (ಯುಕೆಪಿ) ಎಡದಂಡೆ ಹಾಗೂ ಬಲದಂಡೆ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸಭೆ ನಡೆದಾಗಿನಿಂದಲೂ ರೈತರಿಗೆ ನೀರು ಹರಿಸುವಂತೆ ನಿರಂತರವಾಗಿ ಒತ್ತಾಯಿಸುತ್ತಿದ್ದೇವೆ. ಆದರೆ, ಈ ಭಾಗದ ರೈತರಿಗೆ ನೀರು ನೀಡಲು ಸರ್ಕಾರ ಹಿಂದೇಟು ಹಾಕುತ್ತಿದ್ದು, ಈಗಾಗಲೇ ನೆರೆಯ ತೆಲಂಗಾಣ ರಾಜ್ಯಕ್ಕೆ 10 ಟಿಎಂಸಿ ನೀರು ಹರಿಸಿರುವುದು ಇಲ್ಲಿನ ರೈತರಿಗೆ ಮಾಡಿದ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿಗಳ ಭರವಸೆ:

ನೀರಾವರಿ ಸಮಸ್ಯೆ ಕುರಿತು ಇದೇ ತಿಂಗಳ 14ರಂದು ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿದ್ದು, ಅವರು ನೀರು ಹರಿಸುವ ಭರವಸೆ ನೀಡಿದ್ದಾರೆ. ರೈತರ ಹಿತದೃಷ್ಟಿಯಿಂದ ವಿವಿಧ ರೈತ ಸಂಘಟನೆಗಳು ಒಗ್ಗೂಡಿ ಶಹಾಪುರ ತಾಲೂಕಿನ ಭೀಮರಾಯನಗುಡಿ (ಬಿ.ಗುಡಿ) ಬಾಪೂಗೌಡ ವೃತ್ತದಲ್ಲಿ ಅಹೋರಾತ್ರಿ ಧರಣಿ ನಡೆಸಿ ಸರ್ಕಾರದ ಗಮನ ಸೆಳೆದಿದ್ದೇವೆ ಎಂದರು.

ಕಾಲುವೆ ನೀರನ್ನು ನಂಬಿಕೊಂಡು ರೈತರು ಈಗಾಗಲೇ ಮೆಣಸಿನಕಾಯಿ ಬಿತ್ತನೆ ಮಾಡಿದ್ದು, ಬೀಜ, ಗೊಬ್ಬರ, ಔಷಧ ಸೇರಿದಂತೆ ಪ್ರತಿ ಎಕರೆಗೆ ಸುಮಾರು ₹1.50 ಲಕ್ಷದವರೆಗೆ ಖರ್ಚು ಮಾಡಿದ್ದಾರೆ. ಇದೀಗ ಬೆಳೆಗಳಿಗೆ ನೀರಿನ ತೀವ್ರ ಅವಶ್ಯಕತೆ ಇದ್ದು, ನೀರು ಹರಿಸದಿದ್ದರೆ ಬೆಳೆ ಒಣಗಿ ರೈತರು ಸಾಲದ ಸುಳಿಗೆ ಸಿಲುಕುವ ಆತಂಕ ಎದುರಾಗಿದೆ. ಆದ್ದರಿಂದ ಬೆಳೆ ಉಳಿಸಲು ಜನವರಿ ತಿಂಗಳವರೆಗೂ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಒತ್ತಾಯಿಸಿದರು.

ನವೆಂಬರ್ 22ರೊಳಗೆ ಸರ್ಕಾರ ಕಾಲುವೆಗಳಿಗೆ ನೀರು ಹರಿಸಿದರೆ ಸ್ವಾಗತಿಸಲಾಗುವುದು. ಇಲ್ಲವಾದಲ್ಲಿ ರಾಯಚೂರು ಜಿಲ್ಲಾ ಬಂದ್‌ಗೆ ಕರೆ ನೀಡಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಹಾಜಿ ಮಸ್ತಾನಸಾಬ್ ಬಿ. ಗಣೇಕಲ್, ಮುಖಂಡರಾದ ಹನುಮಗೌಡ ಜಾಲಹಳ್ಳಿ, ಉಮ್ಮಣ್ಣ ಮಲದಕಲ್ ಸೇರಿದಂತೆ ಹಲವು ರೈತ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ವರದಿ ಖಾಜಾ ಹುಸೇನ್ ಬಾಬಾ

ಜಾಲಹಳ್ಳಿ

— Khaja Hussain

ಮಾದಕ ವಸ್ತುಗಳ ವಿರುದ್ಧ ಜನಜಾಗೃತಿ ಅಭಿಯಾನಕ್ಕೆ ಕನ್ನಡಪರ ಸಂಘಟನೆಗಳ ಸಹಕಾರ ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ ಜಾಗೃತಿ ಕಾರ್ಯಕ್ರಮ ನಡೆಸಲು ಸಂಘಟನೆಗಳ ಮುಖಂಡರ ಒಮ್ಮತದ ನಿರ್ಣಯ



ರಾಯಚೂರು ಬ್ರೇಕಿಂಗ್ ನ್ಯೂಸ್

ಮಾದಕ ವಸ್ತುಗಳ ವಿರುದ್ಧ ಜನಜಾಗೃತಿ ಅಭಿಯಾನಕ್ಕೆ ಕನ್ನಡಪರ ಸಂಘಟನೆಗಳ ಸಹಕಾರ

ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ ಜಾಗೃತಿ ಕಾರ್ಯಕ್ರಮ ನಡೆಸಲು ಸಂಘಟನೆಗಳ ಮುಖಂಡರ ಒಮ್ಮತದ ನಿರ್ಣಯ

ರಾಯಚೂರು: ನಗರದಲ್ಲಿ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ಜನಜಾಗೃತಿ ಮೂಡಿಸಲು ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವ ಉದ್ದೇಶದಿಂದ ಕನ್ನಡಪರ ಸಂಘಟನೆಗಳ ಒಕ್ಕೂಟ ಸಮಿತಿ ಹಾಗೂ ವಿವಿಧ ಸಂಘಟನೆಗಳ ಮುಖಂಡರ ಪೂರ್ವಭಾವಿ ಸಭೆ ನ.18ರಂದು ನಡೆಯಿತು.

ಈಗಾಗಲೇ ರಾಯಚೂರು ಜಿಲ್ಲಾಡಳಿತದ ವತಿಯಿಂದ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಅಧೀಕ್ಷಕರು ಹಾಗೂ ಮಹಾನಗರ ಪಾಲಿಕೆ ಆಯುಕ್ತರ ನೇತೃತ್ವದಲ್ಲಿ ನಗರದ ವಿವಿಧ ವಾರ್ಡ್‌ಗಳಲ್ಲಿ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವುದು ಕೇವಲ ಜಿಲ್ಲಾಡಳಿತದ ಜವಾಬ್ದಾರಿಯಲ್ಲ; ರಾಯಚೂರಿನ ಪ್ರತಿಯೊಬ್ಬ ನಾಗರಿಕರ ಕರ್ತವ್ಯವೂ ಆಗಿದೆ. ಅದರಲ್ಲೂ ವಿವಿಧ ಸಂಘಟನೆಗಳು ಹಾಗೂ ಕನ್ನಡಪರ ಸಂಘಟನೆಗಳು ಈ ಅಭಿಯಾನದಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಎಐಎಂಐಎಂ ಪಕ್ಷದ ರಾಯಚೂರು ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಹೌದಡಿ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ನ.18ರಂದು ಎಐಎಂಐಎಂ ಪಕ್ಷದ ವತಿಯಿಂದ ಪೂರ್ವಭಾವಿ ಸಭೆ ಆಯೋಜಿಸಲಾಗಿತ್ತು. ಸಮಾಜದ ಆರೋಗ್ಯ, ಯುವಜನರ ಭವಿಷ್ಯ ಹಾಗೂ ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ವಿವಿಧ ಸಂಘಟನೆಗಳ ಮುಖಂಡರನ್ನು ಸಭೆಗೆ ಆಹ್ವಾನಿಸಲಾಗಿತ್ತು.

ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಪದಾಧಿಕಾರಿಗಳು ಒಮ್ಮತದ ನಿರ್ಣಯ ಕೈಗೊಂಡು, ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ ಮಾದಕ ವಸ್ತುಗಳ ವಿರುದ್ಧ ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ತೀರ್ಮಾನಿಸಿದರು.

ನಗರದಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಿ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಎಲ್ಲ ಸಂಘಟನೆಗಳು ಒಗ್ಗಟ್ಟಿನಿಂದ ಸಹಕಾರ ನೀಡಬೇಕು ಎಂದು ಶಬ್ಬೀರ್ ಅಹ್ಮದ್ ಹೌದಡಿ ಮನವಿ ಮಾಡಿದ್ದಾರೆ.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

— Khaja Hussain

HEALTH

ಆಶಾ ವರ್ಕ್ ಕಾರ್ಯಾಚರಣೆಯ ಆರಂಭ



ಆಶಾ ವರ್ಕ್ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.

ಕಾರ್ಯಾಚರಣೆಯು ವಿವಿಧ ಪ್ರದೇಶಗಳಲ್ಲಿ ಸಮನ್ವಯವಾಗಿ ನಡೆಸಲಾಗುತ್ತಿದೆ.

ಸ್ಥಳೀಯ ಅಧಿಕಾರಿಗಳು ಈ ಕಾರ್ಯಕ್ರಮದ ಯಶಸ್ಸಿಗೆ ಸಮುದಾಯದ ಸಹಕಾರವನ್ನು ವಿನಂತಿಸಿದ್ದಾರೆ.

— ಶಿವಪ್ಪ ಬಂಗಾರಪೇಟೆ

LOCAL

ಬಸವಣ್ಣನವರ ಕುರಿತ ಆಕ್ಷೇಪಾರ್ಹ ಹೇಳಿಕೆಗೆ ಬೀದರ್‌ನಲ್ಲಿ ರವಿ ಹುಂಜ ಪ್ರತಿಕೃತಿ ದಹನ



ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಕುರಿತು ಆಕ್ಷೇಪಾರ್ಹ ಹೇಳಿಕೆ ನೀಡಿರುವ ಅನಿವಾಸಿ ಭಾರತೀಯ ಲೇಖಕ ರವಿ ಹುಂಜ ವಿರುದ್ಧ ಬಸವ ಪರ ಸಂಘಟನೆಗಳ ಕಾರ್ಯಕರ್ತರು ಬೀದರ್‌ನಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು. ಜಾಗತಿಕ ಲಿಂಗಾಯತ ಮಹಾಸಭಾದ ನೇತೃತ್ವದಲ್ಲಿ ಬಸವೇಶ್ವರ ವೃತ್ತದಲ್ಲಿ ಸೇರಿದ ಕಾರ್ಯಕರ್ತರು, ರವಿ ಹುಂಜ ವಿರುದ್ಧ ಘೋಷಣೆಗಳನ್ನು ಕೂಗಿದರು. ಅವರ ಪ್ರತಿಕೃತಿಗೆ ಚಪ್ಪಲಿ ಹಾರ ಹಾಕಿ, ಚಪ್ಪಲಿ ಏಟು ಕೊಟ್ಟು, ಬಳಿಕ ಪ್ರತಿಕೃತಿಯನ್ನು ಸುಟ್ಟು ಆಕ್ರೋಶ ಹೊರಹಾಕಿದರು.

ತೆರಳಿ ಜಾಗತಿಕ ಲಿಂಗಾಯತ ಮಹಾಸಭಾ, ರಾಷ್ಟ್ರೀಯ ಬಸವ ದಳ, ಭಾರತೀಯ ಬಸವ ಬಳಗ, ಲಿಂಗಾಯತ ಸಮಾಜ, ಬಸವ ಕೇಂದ್ರ ಹಾಗೂ ಇತರ ಬಸವ ಪರ ಸಂಘಟನೆಗಳ ವತಿಯಿಂದ ರವಿ ಹುಂಜ ವಿರುದ್ಧ ಸಾಮೂಹಿಕ ದೂರು ಸಲ್ಲಿಸಿದರು. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ಭೇಟಿ ಮಾಡಿ ಮುಖ್ಯಮಂತ್ರಿಗೆ ಬರೆದ ಮನವಿ ಪತ್ರವನ್ನು ಅವರಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಮುಖರು, ಬಸವಣ್ಣನವರು 12ನೇ ಶತಮಾನದಲ್ಲೇ ಸಮಾನತೆ, ಕಾಯಕ, ದಾಸೋಹ, ಸಾಮಾಜಿಕ ನ್ಯಾಯ ಹಾಗೂ ಮಾನವೀಯ ಮೌಲ್ಯಗಳನ್ನು ಜಗತ್ತಿಗೆ ಸಾರಿದ ಮಹಾನ್ ದಾರ್ಶನಿಕರು ಎಂದು ಹೇಳಿದರು. ರವಿ ಹುಂಜ ಬಸವಣ್ಣನವರ ವ್ಯಕ್ತಿತ್ವವನ್ನು ಅವಹೇಳನ ಮಾಡುವ ರೀತಿಯಲ್ಲಿ ಮಾತನಾಡಿರುವುದು ತೀವ್ರ ಖಂಡನೀಯ ಎಂದು ಟೀಕಿಸಿದರು. ಇತಿಹಾಸದ ಕುರಿತು ವಿಮರ್ಶೆ ಮಾಡುವ ಸ್ವಾತಂತ್ರ್ಯ ಇದ್ದರೂ, ಸೂಕ್ತ ದಾಖಲೆ ಹಾಗೂ ಆಧಾರಗಳಿಲ್ಲದೆ ಅವಹೇಳನಕಾರಿ ಪದಗಳನ್ನು ಬಳಸುವುದು ಸಲ್ಲದು ಎಂದು ತಿಳಿಸಿದರು.

ಜಾಗತಿಕ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಬಸವರಾಜ ಧನ್ನೂರ ಅವರು, ಬಸವಣ್ಣನವರ ಘನತೆ ನಮ್ಮ ಸ್ವಾಭಿಮಾನ ಎಂದು ಹೇಳಿದರು. ಶರಣರ ವಚನ ಪರಂಪರೆಯ ಗೌರವ ಹಾಗೂ ಬಸವ ತತ್ವದ ಮೌಲ್ಯಗಳ ರಕ್ಷಣೆಗಾಗಿ ನಮ್ಮ ಹೋರಾಟ ಕಾನೂನು ಬದ್ಧವಾಗಿ ಮುಂದುವರಿಯಲಿದೆ ಎಂದು ಅವರು ತಿಳಿಸಿದರು. ಸರ್ಕಾರ ರವಿ ಹುಂಜ ಅವರನ್ನು ಕೂಡಲೇ ಬಂಧಿಸಿ, ಅವರ ವಿವಾದಾತ್ಮಕ ಕೃತಿ 'ಬಸವ ಮಂಟಪ'ವನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಆಗ್ರಹಿಸಲಾಯಿತು. ಚನ್ನಬಸವಾನಂದ ಸ್ವಾಮೀಜಿ, ಮಾತೆ ಸತ್ಯದೇವಿ, ಬಸವಪ್ರಭು ಸ್ವಾಮೀಜಿ, ರಾಷ್ಟ್ರೀಯ ಬಸವ ದಳದ ಜಿಲ್ಲಾ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ಪ್ರಧಾನ ಕಾರ್ಯದರ್ಶಿ ಸುರೇಶ ಸ್ವಾಮಿ, ಜಿಲ್ಲಾ ಲಿಂಗಾಯತ ಸಮಾಜದ ಅಧ್ಯಕ್ಷ ಕುಶಾಲರಾವ್ ಪಾಟೀಲ ಖಾಜಾಪುರ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಉಷಾ ಮಿರ್ಚೆ, ಮಲ್ಲಮ್ಮ ಆರ್. ಪಾಟೀಲ, ಮಹಾಸಭಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ ಹಾಗೂ ಇತರ ಪ್ರಮುಖರು ಈ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

— Basavaraj pujari

LOCAL

ಬೀದರ್‌ನಲ್ಲಿ ಇಂದಿರಾ ಗಾಂಧಿ 109ನೇ ಜಯಂತಿ: ಕೈಗಾರಿಕಾ ಪ್ರದೇಶಗಳ ಮಂಜೂರಾತಿ ನೆನಪಿನೊಂದಿಗೆ



ಬೀದರ್, ನ.19: ಜಿಲ್ಲೆಯ ಕಾಂಗ್ರೆಸ್ ಸಮಿತಿ (ಡಿಸಿಸಿ) ಕಚೇರಿಯಲ್ಲಿ ಮಾಜಿ ಪ್ರಧಾನಿಯ, ಉಕ್ಕಿನ ಮಹಿಳೆ ದಿವಂಗತ ಇಂದಿರಾ ಗಾಂಧಿ ಅವರ 109ನೇ ಜಯಂತಿಯನ್ನು ಜಿಲ್ಲಾಧ್ಯಕ್ಷ ಮನ್ನಾನ್ ಸೇಠ್ ಅವರ ಅಧ್ಯಕ್ಷತೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಇಂದಿರಾ ಗಾಂಧಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಮಾತನಾಡಿದ ಮಾಜಿ ಸಂಸದ ನರಸಿಂಗ್ರಾವ್ ಸೂರ್ಯವಂಶಿ ಅವರು, 1980ರ ಲೋಕಸಭೆ ಚುನಾವಣೆಯಲ್ಲಿ ಮೇದಕ್ ಕ್ಷೇತ್ರದಿಂದ ಸ್ಪರ್ಧಿಸಿದ್ದ ಇಂದಿರಾ ಗಾಂಧಿ ಅವರನ್ನು ಭೇಟಿಯಾದ ಸಂದರ್ಭಗಳನ್ನು ಸ್ಮರಿಸಿದರು. ಅವರು "ನಾನು ಚಿಕ್ಕ ವಯಸ್ಸಿನಲ್ಲಿಯೇ ಸಂಸದನಾಗಿ ಆಯ್ಕೆಯಾಗಿದ್ದಾಗ ಇಂದಿರಾ ಗಾಂಧಿ ಅವರು ತಾಯಿಯ ಮಮತೆಯಿಂದ ನನ್ನನ್ನು ಕಂಡಿದ್ದರು. ಆಗ ದೇಶದ ಕೈಗಾರಿಕಾರಹಿತ ಜಿಲ್ಲೆಗಳ ಪಟ್ಟಿಯಲ್ಲಿದ್ದ ಆರು ಜಿಲ್ಲೆಗಳಲ್ಲಿ ಬೀದರ್ ಕೂಡ ಒಂದಾಗಿತ್ತು. ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಅವರು, ನನ್ನನ್ನು ತಮ್ಮ ಕಚೇರಿಗೆ ಕರೆಸಿಕೊಂಡು ವಿಶೇಷ ಪತ್ರದ ಮೂಲಕ ಬೀದರ್ ಹಾಗೂ ಹುಮನಾಬಾದ್‌ನಲ್ಲಿ ಎರಡು ಬೃಹತ್ ಕೈಗಾರಿಕಾ ಪ್ರದೇಶಗಳ ಸ್ಥಾಪನೆ ಮತ್ತು ಅಭಿವೃದ್ಧಿಗೆ ಅನುಮೋದನೆ ನೀಡಿದ್ದರು" ಎಂದು ಹೇಳಿದರು.

ಹಿರಿಯ ನಾಯಕರಾದ ಪಂಡಿತ್ ಚಿದ್ರಿ, ಶಂಕರ ದೊಡ್ಡಿ, ಅಮೃತರಾವ್ ಚಿಮಕೋಡೆ, ಬಷೀರುದ್ದೀನ್ ಹಲಹಿಪ್ಪರಗಾ ಮುಂತಾದವರು ತಮ್ಮ ಭಾಷಣಗಳಲ್ಲಿ ಇಂದಿರಾ ಗಾಂಧಿ ಅವರ ಆರ್ಥಿಕ, ಸಾಮಾಜಿಕ ಮತ್ತು ಮಹಿಳಾ ಸಬಲೀಕರಣ ಕ್ಷೇತ್ರಗಳ ಕೊಡುಗೆಗಳ ಬಗ್ಗೆ ಮಾತನಾಡಿ, ಅವರ ದಿಟ್ಟತನ ಮತ್ತು ನಾಯಕತ್ವವನ್ನು ಮೆಚ್ಚಿಸಿದರು.

ಜಿಲ್ಲಾಧ್ಯಕ್ಷ ಮನ್ನಾನ್ ಸೇಠ್ ಅವರು ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಸ್ವಾತಂತ್ರ್ಯ ಹೋರಾಟದ ಇತಿಹಾಸ, ತ್ಯಾಗ ಮತ್ತು ಸಾಧನೆಗಳನ್ನು ಅರಿತುಕೊಳ್ಳಬೇಕು ಎಂದು ಒತ್ತಿ ಹೇಳಿದರು. ಕಾರ್ಯಕ್ರಮವನ್ನು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಜಾರ್ಜ್ ಫರ್ನಾಂಡಿಸ್ ನಿರೂಪಿಸಿ ಸ್ವಾಗತಿಸಿದರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ಯೂಸುಫ್ ವಂದನಾರ್ಪಣೆ ಸಲ್ಲಿಸಿದರು. ಉಪಾಧ್ಯಕ್ಷ ವೆಂಕಟ್ರಾವ್ ಶಿಂಧೆ, ಮುಂಚೂಣಿ ಘಟಕಗಳ ಅಧ್ಯಕ್ಷರಾದ ಸಂಜುಕುಮಾರ್ ಡಿ.ಕೆ., ನಿಸಾರ್ ಅಹಮದ್, ಎಂ.ಎ. ಸಮೀ, ಸಂಜುಕುಮಾರ್ ಕಾರ್ಕನಾಳಿಕರ್, ಪ್ರದೀಪ್ ಕುಶ್ನೂರ್, ಶಂಕರ ರೆಡ್ಡಿ, ಗೋವರ್ಧನ ರಾಥೋಡ್, ಚಂದ್ರಕಾಂತ ಪಾಟೀಲ್, ಜುಬೇರ್ ಪಟೇಲ್, ಸಾಯಿಕುಮಾರ್ ಘೋಡ್ಕೆ, ಶಿವಕುಮಾರ್, ಪ್ರಶಾಂತ ದೊಡ್ಡಿ, ಮೋಹನ್ ಕಾಲೇಕರ್, ಜಯಸೂರಜ್, ವಿನಯಕುಮಾರ್ ಮಾಳಗೆ, ರವೀಂದ್ರಕುಮಾರ್, ಪವನ್ ಮೀಠಾರೆ, ಭೀಮರಾವ್ ಮಾಲಗತ್ತಿ, ಸುಕೀರ್ತಿ, ಸಂಗೀತಾ ಕಾರ್ಬಾರಿ, ಸಂಗೀತಾ ಪಾಟೀಲ್ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

— Basavaraj pujari

LOCAL

ಬೀದರ್‌ನಲ್ಲಿ ಕಲ್ಯಾಣ ಪತಿನ ಸೌಹಾರ್ದ ಸಹಕಾರಿಯ 2027ನೇ ವರ್ಷದ ದಿನಚರಿ ಬಿಡುಗಡೆ ಸಮಾರಂಭ



ಬೀದರ್‌ನಲ್ಲಿ 2026ರ ಸಹಕಾರ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಕಲ್ಯಾಣ ಪತಿನ ಸೌಹಾರ್ದ ಸಹಕಾರಿಯ 2027ನೇ ವರ್ಷದ ದಿನಚರಿ (ಕ್ಯಾಲೆಂಡರ್) ಬಿಡುಗಡೆ ಸಮಾರಂಭವನ್ನು ಆಯೋಜಿಸಲಾಯಿತು. ಈ ಸಮಾರಂಭದಲ್ಲಿ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ದಿನಚರಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿದರು.

ಸಮಾರಂಭಕ್ಕೆ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ಅಧ್ಯಕ್ಷ ಜಿ. ನಂಜನಗೂಡ, ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ್, ಮುಖಂಡ ಸೂರ್ಯಕಾಂತ ನಾಗಮಾರಪಳ್ಳಿ, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಅಮರಕುಮಾರ ಖಂಡ್ರೆ, ಸಹಕಾರಿ ಮಹಿಳಾ ಮಹಾಮಂಡಳದ ಅಧ್ಯಕ್ಷೆ ಶಕುಂತಲಾ ಬೆಲ್ದಾಳೆ, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್, ಸಹಕಾರ ಸಂಘಗಳ ಜಂಟಿ ನಿಬಂಧಕ ಎಚ್.ಪಿ. ಕುಮಾರ, ಕಲ್ಯಾಣ ಪತಿನ ಸೌಹಾರ್ದ ಸಹಕಾರಿ ಅಧ್ಯಕ್ಷ ಗುರುನಾಥ್ ಜಾಂತಿಕರ್, ಸಂಯುಕ್ತ ಸಹಕಾರಿಯ ನಿರ್ದೇಶಕರಾದ ಹನುಮಂತಯ್ಯ ಶೆಟ್ಟಿ, ಶ್ರೀಕಾಂತ ಹಾಗೂ ಸಂಜೀವ್ ಮಹಾಜನ್ ಸೇರಿದಂತೆ ಸಹಕಾರ ಕ್ಷೇತ್ರದ ಗಣ್ಯರು ಉಪಸ್ಥಿತರಿದ್ದರು.

ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಹೊಸ ಉತ್ಸಾಹವನ್ನು ನೀಡಿದ್ದು, 2027ನೇ ವರ್ಷದ ಕೃಷಿ, ವಾಣಿಜ್ಯ ಮತ್ತು ಸಾಮಾಜಿಕ ಚಟುವಟಿಕೆಗಳ ವೇಳಾಪಟ್ಟಿಯನ್ನು ಸದಸ್ಯರಿಗೆ ಒದಗಿಸುವ ಉದ್ದೇಶ ಹೊಂದಿದೆ. ಸಮಾರಂಭದ ಮೂಲಕ ಸಹಕಾರ ಸಂಸ್ಥೆಗಳ ಕಾರ್ಯಚಟುವಟಿಕೆಗಳ ಪಾರದರ್ಶಕತೆ ಮತ್ತು ಸದಸ್ಯರ ಪಾಲ್ಗೊಳ್ಳುವಿಕೆಯನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ.

— Basavaraj pujari

LOCAL

ಬೀದರ್‌ನಲ್ಲಿ 22ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ: 14,000 ಸದಸ್ಯರು ಭಾಗವಹಿಸುವರು



ಬೀದರ್ ಜಿಲ್ಲೆಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ನವೆಂಬರ್ 21 ಮತ್ತು 22 ರಂದು 22ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದೆ. ಸಮ್ಮೇಳನದ ಸರ್ವಾಧ್ಯಕ್ಷರು ಡಾ. ಬಸವರಾಜ ಬಲ್ಲೂರ, 14,000 ಸದಸ್ಯರು ಹಾಗೂ ಕನ್ನಡಾಭಿಮಾನಿಗಳನ್ನು ಆಹ್ವಾನಿಸಲಾಗಿದೆ.

ಸಮ್ಮೇಳನದ ಸಿದ್ಧತೆಗಳು ಸರ್ವಾಧ್ಯಕ್ಷರ ನೇತೃತ್ವದಲ್ಲಿ ಪೂರ್ಣಗೊಂಡಿದ್ದು, ವಿವಿಧ ಮಳಿಗೆಗಳು, ಪ್ರದರ್ಶನಗಳು, ಭೋಜನ ವ್ಯವಸ್ಥೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜಿಸಲಾಗಿದೆ.

ಮೆರವಣಿಗೆ ಬೆಳಿಗ್ಗೆ 8.30ಕ್ಕೆ ನಡೆಯಲಿದೆ. ಗಣ್ಯರು, ಶಾಸಕರು ಮತ್ತು ಸಾಹಿತ್ಯಕಾರರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಡಾ. ಬಸವರಾಜ ಬಲ್ಲೂರ ಸರ್ವಾಧ್ಯಕ್ಷರ ನುಡಿಯನ್ನು ಹೇಳಲಿದ್ದು, ಶಾಸಕರು ಪ್ರಭು ಚವಾಣ್ ಮತ್ತು ಡಾ. ಶೈಲೇಂದ್ರ ಬೆಲ್ದಾಳೆ ಸೇರಿದಂತೆ ಅನೇಕ ಗಣ್ಯರನ್ನು ಸನ್ಮಾನಿಸಲಾಗುವುದು.

22ನೇ ದಿನ ಶಾಲಾ ಮಕ್ಕಳ ಸಾಂಸ್ಕೃತಿಕ ಪ್ರದರ್ಶನ, ಕವಿ ಮೇಳ, ಗೋಷ್ಠಿಗಳು ಮತ್ತು ಸಮಾರೋಪ ಸಮಾರಂಭ ನಡೆಯಲಿದೆ.

ಈ ಸಮ್ಮೇಳನವು ಕನ್ನಡ ಸಾಹಿತ್ಯದ ಪ್ರಗತಿಯನ್ನು ಉತ್ತೇಜಿಸುವುದರ ಜೊತೆಗೆ ಸ್ಥಳೀಯ ಲೇಖಕರು ಮತ್ತು ವಿದ್ಯಾರ್ಥಿಗಳಿಗೆ ವೇದಿಕೆ ಒದಗಿಸುವ ಮಹತ್ವದ ಕಾರ್ಯಕ್ರಮವಾಗಿದೆ.

— Basavaraj pujari

LOCAL

ಮಡಿವಾಳೇಶ್ವರ ಶಾಲೆಯ ಮೂವರು ವಿದ್ಯಾರ್ಥಿಗಳು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು, ಬೀದರ್ ಜಿಲ್ಲೆಯ ಹೆಮ್ಮೆ



ಶ್ರೀ ಮಡಿವಾಳೇಶ್ವರ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮೂವರು ವಿದ್ಯಾರ್ಥಿಗಳು, ರಂಜನ್ ಬಸವರಾಜ್, ಯೋಗೇಶ್ ಶಿವಶರಣಪ್ಪ ಮತ್ತು ಕಾರ್ತಿಕ್ ರಾಜಕುಮಾರ್, ಗೀತಾ ನಿಕೇತನ ಆವಾಸೀಯ ವಿದ್ಯಾಲಯದ ಅಖಿಲ ಭಾರತೀಯ ಮಟ್ಟದ ಸಂಸ್ಕೃತಿ ಜ್ಞಾನ ರಸಪ್ರಶ್ನೆ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ಸ್ಪರ್ಧೆ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತವಾಗಿದ್ದು, ಬೀದರ್ ಜಿಲ್ಲೆಯ ಹೆಮ್ಮೆಯನ್ನು ಹೆಚ್ಚಿಸಿದೆ.

ವಿದ್ಯಾಭಾರತಿ ವತಿಯಿಂದ ಆಯೋಜಿಸಲಾದ ಜಿಲ್ಲಾ ಹಾಗೂ ರಾಜ್ಯಮಟ್ಟದ ಸ್ಪರ್ಧೆಗಳಲ್ಲಿ ವಿವಿಧ ಹಂತಗಳನ್ನು ಯಶಸ್ವಿಯಾಗಿ ದಾಟಿ, ಕ್ಷೇತ್ರಮಟ್ಟದಲ್ಲಿ ಉತ್ತಮ ಸಾಧನೆ ತೋರಿದ ವಿದ್ಯಾರ್ಥಿಗಳು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ಆಡಳಿತ ಮಂಡಳಿ ವಿದ್ಯಾರ್ಥಿಗಳಿಗೆ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಂಡು ಸನ್ಮಾನಿಸಿದರು.

ಹನುಮಂತರಾವ್ ಪಾಟೀಲ್, ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಬಿ. ಸಜ್ಜನ್ ಶೆಟ್ಟಿ ಹಾಗೂ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಶರಣು ಪಾಟೀಲ್, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಅರ್ಚನಾ ಸಿರಿಗೆರೆ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದರು. ವಿದ್ಯಾರ್ಥಿಗಳು ತಮ್ಮ ಪ್ರತಿಭೆ, ಶಕ್ತಿ, ಸಾಮರ್ಥ್ಯ ಮತ್ತು ಆತ್ಮವಿಶ್ವಾಸವನ್ನು ಮತ್ತಷ್ಟು ವೃದ್ಧಿಸಿಕೊಂಡು ರಾಷ್ಟ್ರಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡಿ ಶಾಲೆ, ತಂದೆ-ತಾಯಿ, ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿ ತರಬೇಕೆಂದು ಶುಭ ಹಾರೈಸಿದರು.

ಈ ಸಾಧನೆ ಶಾಲೆಯ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆ ಹಾಗೂ ಸ್ಫೂರ್ತಿಯಾಯಿತು, ಮತ್ತು ವಿದ್ಯಾರ್ಥಿಗಳ ಸ್ಮರಣಶಕ್ತಿ, ಆತ್ಮವಿಶ್ವಾಸ ಹಾಗೂ ಸಾಮರ್ಥ್ಯ ಹೆಚ್ಚುವಂತೆ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಶಿಕ್ಷಕರ ಮಾರ್ಗದರ್ಶನದಲ್ಲಿ ಸಾಧನೆಯ ಹಾದಿಯಲ್ಲಿ ಮುನ್ನಡೆಯಬೇಕು ಎಂಬ ಸಂದೇಶವನ್ನು ನೀಡಿತು.

— Basavaraj pujari

LOCAL

ರೈತರ ರಸ್ತೆ ತಡೆ ಚಳುವಳಿ: ಭಾಲ್ಕಿ ತಾಲ್ಲೂಕಿನಲ್ಲಿ ಮುಖಂಡರು ಬಂಧಿತರಾದರು



ಭಾಲ್ಕಿ ತಾಲ್ಲೂಕಿನ ಅಳಂದಿ ಗ್ರಾಮದ ಸಮೀಪದ ಡೋಣಗಾಪುರ ಕ್ರಾಸ್‌ನಲ್ಲಿ ಹೆದ್ದಾರಿಯಲ್ಲಿ ರೈತರ ರಸ್ತೆ ತಡೆ ಚಳುವಳಿ ನಡೆಯಿತು. ಈ ಚಳುವಳಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದರು.

ಆಗಮಿಸಿದ ಪೊಲೀಸರು ರೈತ ಸಂಘದ ಮುಖಂಡರು ಮತ್ತು ಕಾರ್ಯಕರ್ತರನ್ನು ವಶಕ್ಕೆ ಪಡೆದು ಸಂತಪುರ ಪೊಲೀಸ್ ಠಾಣೆಗೆ ಕರೆದೊಯ್ದು ಬಂಧಿಸಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಿ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರು ಆಗ್ರಹಿಸಿದರು. ರೈತರ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನ ಮಾಡದೆ, ಅವರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸರ್ವೋದಯ ಕರ್ನಾಟಕ ಪಕ್ಷ ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಾನಂದ ಸೋಮಯ್ಯ ಸ್ವಾಮೀಜಿ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಜಗದೀಶ ಕನ್ನಾಳೆ (ಭಾಲ್ಕಿ ತಾಲೂಕು), ಅಮೃತ ಪಾಟೀಲ್, ಸಂಗಶೆಟ್ಟಿ ದಾನಾ, ಹನುಮಂತ, ಸುನಿಲ್, ಬಸವರಾಜ್, ಮಲ್ಲಿಕಾರ್ಜುನ, ಶಿವರಾಜ್, ವಿಲಾಸ, ಪರಮೇಶ, ಚಾಂದ್ ಸಾಬ್, ಸಂತೋಷ್ ಸೇರಿದಂತೆ ಹಲವರು ಇದ್ದರು.

ಬೇಡಿಕೆಗಳು ಈಡೇರುವವರೆಗೆ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರು ಹೇಳಿದರು.

— Basavaraj pujari

HEALTH

ಬೀದರ್‌ನಲ್ಲಿ ಅನುಮತಿ ಇಲ್ಲದ ಚಂದ್ ಹೆಲ್ತ್ ಕೇರ್ ಕ್ಲಿನಿಕ್ ಮೇಲೆ ಕಾವಲುಪಡೆ ತನಿಖೆ ಬೇಡಿಕೆ



ಕರ್ನಾಟಕ ರಕ್ಷಣಾ ವೇದಿಕೆ (ಕಾವಲುಪಡೆ) ಜಿಲ್ಲಾ ಘಟಕ, ಬೀದರ್ ಜಿಲ್ಲೆಯ ಶಾಹಾಪುರ ಗೇಟ್ ಬಳಿ ಚಂದ್ ಹೆಲ್ತ್ ಕೇರ್ ಕ್ಲಿನಿಕ್‌ನ್ನು ಸರ್ಕಾರದ ಅನುಮತಿ ಇಲ್ಲದೆ ನಡೆಸಲಾಗುತ್ತಿದೆ ಎಂದು ಆರೋಪಿಸಿ, ಸಂಬಂಧಿತ ಅಧಿಕಾರಿಗಳಿಂದ ತನಿಖೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಕಲ್ಕತ್ತಾದಿಂದ ಬಂದಿರುವ ಸೈಯದ್ ಅಹ್ಮದ್ ಹುಸೇನ್ ಅವರು ಈ ಕ್ಲಿನಿಕ್‌ನ್ನು ನಡೆಸುತ್ತಿದ್ದಾರೆ; ಅನುಮತಿ ಪಡೆಯದೆ ಕಾರ್ಯನಿರ್ವಹಿಸುವುದರ ಜೊತೆಗೆ, ಅಧಿಕಾರಿಗಳು ಪರಿಶೀಲನೆ ನಡೆಸದೆ ಹಣ ಪಡೆದು ಕ್ಲಿನಿಕ್ ತೆರೆಯಲು ಸಹಕರಿಸಿದ್ದಾರೆ ಎಂಬ ಗಂಭೀರ ಆರೋಪವೂ ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಮನವಿಯಲ್ಲಿ ಕ್ಲಿನಿಕ್‌ನ ದಾಖಲೆಗಳು, ವೈದ್ಯಕೀಯ ಅರ್ಹತೆ, ಸರ್ಕಾರದ ಅನುಮತಿ ಹಾಗೂ ಕಾರ್ಯನಿರ್ವಹಣೆಯ ಕುರಿತು ಸಮಗ್ರ ತನಿಖೆ ನಡೆಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕ್ಲಿನಿಕ್ ನಡೆಸುವವರ ಹಾಗೂ ಅನುಮತಿ ಪಡೆಯಲು ಸಹಕರಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸ್ಪಷ್ಟವಾಗಿ ಬೇಡಿಕೆ ಮಾಡಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಿದ ಈ ಮನವಿಯಲ್ಲಿ ಕಾವಲುಪಡೆ ಬೀದರ್ ಜಿಲ್ಲಾ

ಬೀದರ್: ಧರಿ ಹನುಮಾನ ಸುಕ್ಷೇತ್ರದಿಂದ ಕಲ್ಮೂಡದವರೆಗೆ ಭಕ್ತಿ ಪಾದಯಾತ್ರೆಗೆ ಚಾಲನೆ



ಬೀದರ್: ಔರಾದ ತಾಲ್ಲೂಕಿನ ಲಾಧಾ ಗ್ರಾಮದ ಶ್ರೀ ಶ್ರೀ ಶ್ರೀ ಗುರುದೇವ ದತ್ತ ದಿಗಂಬರ ಮಾಣಿಕೇಶ್ವರ ಧರಿ ಹನುಮಾನ ಸುಕ್ಷೇತ್ರದಿಂದ ಕಲ್ಮೂಡದವರೆಗೆ ಹಮ್ಮಿಕೊಂಡಿರುವ ಪಾದಯಾತ್ರೆಗೆ ಧಾರ್ಮಿಕ ವಿಧಿವಿಧಾನಗಳೊಂದಿಗೆ ಚಾಲನೆ ನೀಡಲಾಯಿತು. ಈ ಪಾದಯಾತ್ರೆ ಧರಿಹನುಮಾನ ಮಂದಿರದಿಂದ ಪ್ರಾರಂಭಗೊಂಡು ಲಾಧಾ, ಯೆರನಳ್ಳಿ, ಗಾಯಮುಖ, ಮೈಲಾರ ಮಲ್ಲಣ್ಣಾ, ಬ್ಯಾಲಹಳ್ಳಿ, ಸಿಮಿನಾಗನಾಥ, ಹುಡಗಿ, ಇಟಗಾ, ಸೊಂತ ಮತ್ತು ಚೆಂಗಟಾ ಮೂಲಕ 23ನೇ ತಾರೀಖು ಕಲ್ಮೂಡ ತಲುಪಲಿದೆ.

ಯುವ ಮುಖಂಡ ಪ್ರತೀಕ ಪ್ರಭು ಚವ್ಹಾಣ ಅವರು ಪಾದಯಾತ್ರೆಯ ಧ್ವಜಾರೋಹಣ ಮಾಡಿ ಚಾಲನೆ ನೀಡಿದರು. ಮಾತನಾಡಿ ಅವರು, ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವ ಭಕ್ತರು ಶ್ರದ್ಧೆ ಮತ್ತು ಭಕ್ತಿಯಿಂದ ಯಾವುದೇ ಆತುರವಿಲ್ಲದೆ ಸಾಗಬೇಕು. ರಸ್ತೆಗಳಲ್ಲಿ ವಾಹನಗಳ ಸಂಚಾರವಿರುವುದರಿಂದ ಎಚ್ಚರಿಕೆ ವಹಿಸಬೇಕು. ಭಕ್ತರು ದೃಢ ಸಂಕಲ್ಪದೊಂದಿಗೆ ಪಾದಯಾತ್ರೆ ಕೈಗೊಂಡರೆ ಮಾಣಿಕೇಶ್ವರ ದೇವರ ಆಶೀರ್ವಾದ ಸದಾ ಅವರೊಂದಿಗಿರುತ್ತದೆ ಎಂದು ತಿಳಿಸಿದರು. ಧಾರ್ಮಿಕ ಕಾರ್ಯಕ್ರಮಗಳು ಮತ್ತು ಸತ್ಸಂಗಗಳ ಮೂಲಕ ಈ ಭಾಗದ ಜನರಲ್ಲಿ ಆಧ್ಯಾತ್ಮಿಕ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಕಾರ್ಯಕ್ರಮವು ಹೆಡಗಾಪುರ ಶಿವಲಿಂಗೇಶ್ವರ ಸಂಸ್ಥಾನ ಮಠದ ಪೂಜ್ಯ ಷ.ಬ್ರ. ಶಿವಲಿಂಗ ಶಿವಾಚಾರ್ಯರ ಸಾನಿಧ್ಯದಲ್ಲಿ ಹಾಗೂ ಪೂಜ್ಯ ಷ.ಬ್ರ. ದಾರುಕಲಿಂಗ ಶಿವಾಚಾರ್ಯರ ನೇತೃತ್ವದಲ್ಲಿ ನಡೆಯಿತು. ಪೂಜ್ಯ ಅಭಿನವ ರುದ್ರಮುನಿ ಶಿವಾಚಾರ್ಯರು ಮಾತನಾಡಿ, ಮಾಣಿಕ ಪ್ರಭುಗಳು ಎಲ್ಲಿಗೂ ಹೋಗಿಲ್ಲ, ಭಕ್ತರ ಹೃದಯದಲ್ಲಿಯೇ ನೆಲೆಸಿದ್ದಾರೆ. ಶುದ್ಧ ಮನಸ್ಸಿನಿಂದ ದೇವರನ್ನು ಸ್ಮರಿಸುತ್ತಾ ಪಾದಯಾತ್ರೆ ಕೈಗೊಂಡರೆ ಒಳಿತಾಗುತ್ತದೆ. ಪಾದಯಾತ್ರೆಯ ಸಂದರ್ಭದಲ್ಲಿ ಸಂಸಾರದ ಚಿಂತೆಗಳನ್ನು ಬದಿಗಿಟ್ಟು ದೇವರ ಧ್ಯಾನ ಮತ್ತು ಸ್ಮರಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಾಬು ವಾಲಿ ಅವರು ಮಾತನಾಡಿ, ಮಹಾತ್ಮರು ತಮ್ಮ ವೈಯಕ್ತಿಕ ಸುಖ-ಸೌಲಭ್ಯಗಳನ್ನು ತ್ಯಜಿಸಿ ಸಮಾಜದ ಒಳಿತಿಗಾಗಿ ಜೀವನ ಮುಡಿಪಾಗಿಟ್ಟವರು. ಅಂತಹ ಮಹಾತ್ಮರಲ್ಲಿ ಮಾಣಿಕ ಪ್ರಭುಗಳು ಪ್ರಮುಖರು. ಭಕ್ತರ ಕಲ್ಯಾಣಕ್ಕಾಗಿ ಚಿಂತಿಸಿದ ಮಹಾತ್ಮರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ ಬಿರಾದಾರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಉದ್ಯಮಿಗಳು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು. ವಿಜಯಕುಮಾರ ಪಾಟೀಲ ಯರನಳ್ಳಿ ಅಧ್ಯಕ್ಷತೆ ವಹಿಸಿದ್ದು, ಭೋಜಾರೆಡ್ಡಿ ಅವರು ನಿರೂಪಿಸಿದ್ದರು. ಸಾವಿರಾರು ಭಕ್ತರು ಈ ಪಾದಯಾತ್ರೆಯಲ್ಲಿ ಭಾಗವಹಿಸಿದ್ದಾರೆ.

— Basavaraj pujari

ಜೆಸ್ಕಾಂ ಬೋಗಸ್ ಬಿಲ್‌ಗಳ ಕುರಿತು ಬೀದರ್‌ದ ತನಿಖೆ ಬೇಡಿಕೆ



ಕರ್ನಾಟಕ ಪ್ರಜಾಶಕ್ತಿ ಸಮಿತಿ (ಕೆ.ಪಿ.ಸಿ.) ಬೀದರ್ ನಗರ, ಹುಪಳಾ, ಹಾಲಹಿಪ್ಪರಗಾ, ಮುರಾಳ, ಬೀರಿ(ಕೆ), ಹಜನಾಳ, ಕಪಲಾಪುರ, ಚಾಂಬೋಳ್ ಮತ್ತು ಇತರ ಗ್ರಾಮಗಳಲ್ಲಿ ಜೆಸ್ಕಾಂ ಬೀದರ್ ವಿಭಾಗದ ವಿವಿಧ ಕಾಮಗಾರಿಗಳ ಹೆಸರಲ್ಲಿ ಎತ್ತಲಾದ ಬೋಗಸ್ ಬಿಲ್‌ಗಳ ಕುರಿತು ತನಿಖೆ ನಡೆಸುವಂತೆ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದೆ.


ಸಮಿತಿಯ ಪದಾಧಿಕಾರಿಗಳು ಈ ಮನವಿಯನ್ನು ನಗರದಲ್ಲಿ ಬುಧವಾರ ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಅವರಿಗೆ ಸಲ್ಲಿಸಿದರು. ಬೋಗಸ್ ಬಿಲ್‌ಗಳ ಮೂಲಕ ಲಕ್ಷಾಂತರ ರೂಪಾಯಿ ಅವ್ಯವಹಾರ ನಡೆದಿದೆ ಎಂದು ದೂರಿದರು.

ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪುಂಡಲೀಕ ಎಸ್. ಗೋಖಲೆ ಅವರನ್ನು ಅವ್ಯವಹಾರದಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿದರು. ಸಮಿತಿ ಕಾಮಗಾರಿಗಳ ಪರಿಶೀಲನೆ ನಡೆಸಿ, ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಹಾಗೂ ದುರುಪಯೋಗ ಪಡಿಸಿಕೊಂಡ ಹಣವನ್ನು ವಸೂಲಿ ಮಾಡಲು ಆಗ್ರಹಿಸಿದೆ.

ಸಮಿತಿಯ ಜಿಲ್ಲಾ ಅಧ್ಯಕ್ಷ ಸಾಯಿ ಸಿಂಧೆ, ಉಪಾಧ್ಯಕ್ಷ ಮಹೇಂದ್ರಕುಮಾರ ಹೊಸಮನಿ, ಬೀದರ್ ನಗರ ಘಟಕದ ಅಧ್ಯಕ್ಷ ವಿನೋದ್ ಸಿಂಧೆ, ವಿದ್ಯಾರ್ಥಿ ಘಟಕದ ಅಧ್ಯಕ್ಷ ಆಕಾಶ್ ತ್ರಿಮುಖೆ, ಮುಖಂಡರಾದ ರಾಜಕುಮಾರ, ಸಂಗಮೇಶ ಬಾವಿದೊಡ್ಡಿ ಮತ್ತಿತರರು ಈ ಮನವಿಯಲ್ಲಿ ಭಾಗವಹಿಸಿದ್ದರು.

— Basavaraj pujari

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನೂತನ ಪ್ರಾಂಶುಪಾಲರ ನೇಮಕಾತಿ ಆದೇಶ ವಿತರಣೆ



ಬೆಂಗಳೂರು: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ನೂತನವಾಗಿ ಆಯ್ಕೆಯಾದ ಪ್ರಾಂಶುಪಾಲರಿಗೆ ನೇಮಕಾತಿ ಆದೇಶ ವಿತರಿಸಲಾಯಿತು.

ಬೆಂಗಳೂರಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ‘ಶೈಕ್ಷಣಿಕ ಸಾರಥ್ಯ’ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪಾಲ್ಗೊಂಡು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನೂತನವಾಗಿ ಆಯ್ಕೆಯಾದ ಪ್ರಾಂಶುಪಾಲರಿಗೆ ನೇಮಕಾತಿ ಆದೇಶಗಳನ್ನು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಕಾಲೇಜುಗಳ ಶೈಕ್ಷಣಿಕ ಗುಣಮಟ್ಟವನ್ನು ಉನ್ನತೀಕರಿಸುವಲ್ಲಿ ಪ್ರಾಂಶುಪಾಲರ ನಾಯಕತ್ವ ಮಹತ್ವದ ಪಾತ್ರ ವಹಿಸುತ್ತದೆ. ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ನಡುವೆ ಸಮನ್ವಯ ಸಾಧಿಸಿ, ಗುಣಮಟ್ಟದ ಶಿಕ್ಷಣ ಮತ್ತು ಉತ್ತಮ ಕಲಿಕಾ ವಾತಾವರಣ ನಿರ್ಮಿಸುವ ಜವಾಬ್ದಾರಿ ಪ್ರಾಂಶುಪಾಲರ ಮೇಲಿದೆ. ನೂತನ ಪ್ರಾಂಶುಪಾಲರ ನೇತೃತ್ವದಲ್ಲಿ ರಾಜ್ಯದ ಉನ್ನತ ಶಿಕ್ಷಣ ಕ್ಷೇತ್ರ ಮತ್ತಷ್ಟು ಪ್ರಗತಿ ಸಾಧಿಸಲಿದೆ ಎಂಬ ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

— Viswanatha D R

ಕಾರ್ಯಕರ್ತೆಯರೆ ಸಭೆ - ಆರೋಗ್ಯ ಸಚಿವ ಯು.ಟಿ. ಖಾದರ್ ಅವರೊಂದಿಗೆ ಬೇಡಿಕೆ, ಸಮಸ್ಯೆಗಳ ಚರ್ಚೆ - ಮಾಸಿಕ ಗೌರವಧನ ಹೆಚ್ಚಳ ಸೇರಿದಂತೆ ಬೇಡಿಕೆ - ಸಚಿವ ಸಂಪುಟ, ಅಧಿವೇಶನದಲ್ಲಿ ಚರ್ಚಿಸಿ ನಿರ್ಧಾರದ ಭರವಸೆ



ಗೃಹ ಕಚೇರಿ ಕೃಷ್ಣಾದಲ್ಲಿ ಆಶಾ ಕಾರ್ಯಕರ್ತೆಯರ ಸಭೆ

ಬೆಂಗಳೂರು: ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಆರೋಗ್ಯ ಸಚಿವರಾದ ಶ್ರೀ ಯು.ಟಿ. ಖಾದರ್ ಅವರೊಂದಿಗೆ ಆಶಾ ಕಾರ್ಯಕರ್ತೆಯರ ಸಭೆ ನಡೆಸಿ, ಅವರ ಬೇಡಿಕೆಗಳು ಹಾಗೂ ಸಮಸ್ಯೆಗಳನ್ನು ಆಲಿಸಲಾಯಿತು.

ಮಾಸಿಕ ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳನ್ನು ಆಶಾ ಕಾರ್ಯಕರ್ತೆಯರು ಮುಂದಿಟ್ಟಿದ್ದು, ಈ ಕುರಿತು ಸಚಿವ ಸಂಪುಟ, ಸಂಬಂಧಪಟ್ಟ ಸಚಿವರು ಹಾಗೂ ಮುಂಬರಲಿರುವ ವಿಧಾನ ಮಂಡಲ ಅಧಿವೇಶನದಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದೆ.

ಈ ವೇಳೆ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯಾಧ್ಯಕ್ಷರಾದ ಕೆ. ಸೋಮಶೇಖರ್ ಯಾದಗಿರಿ ಹಾಗೂ ರಾಜ್ಯ ಕಾರ್ಯದರ್ಶಿಯಾದ ಡಿ. ನಾಗಲಕ್ಷ್ಮಿ ಅವರು ಉಪಸ್ಥಿತರಿದ್ದರು.

— Ningappa

ನವರಸಪುರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ



ಪತ್ರಿಕಾ ಪ್ರಕಟಣೆ

ನವರಸಪುರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ

ವಿಜಯಪುರ: ನಗರದ ನವರಸಪುರದ ಸೇನಾ ನಗರದ ಸುಕ್ಷೇತ್ರ ಶ್ರೀ ಶಿವಾಲಯದಲ್ಲಿ ದಿನಾಂಕ 19-11-2026 ರಂದು ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು.

ಈ ಶಿಬಿರದಲ್ಲಿ ಮಧುಮೇಹ, ರಕ್ತದೊತ್ತಡ ಹಾಗೂ ಹೃದಯ ಸಂಬಂಧಿ ಕಾಯಿಲೆಗಳ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು.

ಜಿಲ್ಲಾ ಆರೋಗ್ಯ ಇಲಾಖೆಯ THO ಡಾ. ಪರಶುರಾಮ್ ಹಿಟ್ನಳ್ಳಿ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಶಿಬಿರವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಪ್ರತಿಯೊಬ್ಬರೂ ಆಗಾಗ್ಗೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಸಂಘದ ಅಧ್ಯಕ್ಷರಾದ ಶ್ರೀ ಎಸ್.ಎಲ್. ಇಂಗಳೇಶ್ವರ ಮಾತನಾಡಿ, ಸರ್ಕಾರ ಜನರಿಗೆ ಹಲವು ಭಾಗ್ಯಗಳನ್ನು ನೀಡುತ್ತದೆ. ಆದರೆ ಆರೋಗ್ಯ ಭಾಗ್ಯವನ್ನು ನಾವೇ ಕಾಪಾಡಿಕೊಳ್ಳಬೇಕು. ಆರೋಗ್ಯವೇ ಭಾಗ್ಯ ಎಂಬುದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ರತ್ನಾಕರ್, ಶ್ರೀಶೈಲ್ ವಾಗಮೋರೆ, RIO ಗೌಡರ್, ಇಮಾಮ್ ಸಾಬ್ ಕಲಬುರ್ಗಿ, ನಾಗರಾಜ್ ತಾಳಿಕೋಟಿ, ಶ್ರೀಮತಿ ವೇಣಾ ಕಟ್ಟಿಮನಿ, ಪ್ರಮೋದ್, ಕುಮಾರಿ ಶೀತಾ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಂಘದ ಗೌರವಾಧ್ಯಕ್ಷರಾದ ಶ್ರೀ ಬಿಳಿ ಕಡಕೋಳ, ಮುಖ್ಯ ಕಾರ್ಯದರ್ಶಿ ಕೆ.ಜಿ. ಕೋಟ್ಯಾಳ, ಉಪಾಧ್ಯಕ್ಷರಾದ ಎಸ್.ಎಸ್. ಓತಿಹಾಳ ಹಾಗೂ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ವಂದನಾರ್ಪಣೆ ಸಲ್ಲಿಸಿದರು. ಶ್ರೀ ಡಿ.ಎಂ. ಘೋರ್ಪಡೆ ಕಾರ್ಯಕ್ರಮ ನಿರೂಪಿಸಿದರು.

ಹಿರಿಯ ನಾಗರಿಕರ ಆರೋಗ್ಯದ ಹಿತದೃಷ್ಟಿಯಿಂದ ಆಯೋಜಿಸಲಾದ ಈ ಉಚಿತ ಆರೋಗ್ಯ ತಪಾಸಣಾ ಶಿಬಿರವು ಯಶಸ್ವಿಯಾಗಿ ಜರುಗಿತು.

ಇಂತಿ,

ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ,

ನವರಸಪುರ, ವಿಜಯಪುರ.

— YALLAPPA RAGATE (PATIL)

ವಾಲ್ಮೀಕಿ ಶ್ರೀಗಳು ಭೇಟಿ - ಬಿ.ವಿ. ನಾಯಕ ಅವರ ಹುಟ್ಟುಹಬ್ಬದ ಪ್ರಯುಕ್ತ ನಿವಾಸಕ್ಕೆ ಭೇಟಿ ನೀಡಿದ ಪ್ರಸನ್ನಾನಂದ ಪುರಿ ಮಹಾಸ್ವಾಮಿಗಳು - ಸಂದೀಪ್ ನಾಯಕ ಅವರಿಂದ ವಿವಾಹ ಆಮಂತ್ರಣ ಪತ್ರಿಕೆ ನೀಡಿ ಆಹ್ವಾನ



ವಾಲ್ಮೀಕಿ ಶ್ರೀಗಳು ಭೇಟಿ

ರಾಯಚೂರು: ರಾಯಚೂರು ಜಿಲ್ಲೆಯ ಮಾಜಿ ಲೋಕಸಭಾ ಸದಸ್ಯರಾದ ಸನ್ಮಾನ್ಯ ಶ್ರೀ ಬಿ.ವಿ. ನಾಯಕ ಅವರ ಹುಟ್ಟುಹಬ್ಬದ ಪ್ರಯುಕ್ತ ಅವರ ನಿವಾಸಕ್ಕೆ ಭೇಟಿ ನೀಡಿದ ರಾಜನಹಳ್ಳಿ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಪರಮಪೂಜ್ಯ ಪೀಠಾಧಿಪತಿಗಳಾದ ಶ್ರೀ ಪ್ರಸನ್ನಾನಂದ ಪುರಿ ಮಹಾಸ್ವಾಮಿಗಳವರಿಗೆ, ಕ್ಯಾಧಿಗೇರಾ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀಯುತ ಸಂದೀಪ್ ನಾಯಕ ಅವರು ತಮ್ಮ ವಿವಾಹದ ಆಮಂತ್ರಣ ಪತ್ರಿಕೆಯನ್ನು ನೀಡಿ, ವಿವಾಹ ಸಮಾರಂಭಕ್ಕೆ ಆತ್ಮೀಯವಾಗಿ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಪರಮಪೂಜ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.

— Ningappa

ಶಾಶ್ವತ ಬಸ್ ವ್ಯವಸ್ಥೆಗೆ ಆಗ್ರಹಿಸಿ SFI ಡಿಪೋ ಮುತ್ತಿಗೆ ### ವಿದ್ಯಾಗಿರಿ ಹಾಸ್ಟೆಲ್‌ಗಳು ಸೇರಿ ವಿವಿಧ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಒತ್ತಾಯ; ಡಿಪೋ ವ್ಯವಸ್ಥಾಪಕರ ಲಿಖಿತ ಭರವಸೆ ಬಳಿಕ ಪ್ರತಿಭಟನೆ ವಾಪಸ್ *



ದೇವದುರ್ಗ ಬ್ರೇಕಿಂಗ್ ನ್ಯೂಸ್

ಶಾಶ್ವತ ಬಸ್ ವ್ಯವಸ್ಥೆಗೆ ಆಗ್ರಹಿಸಿ SFI ಡಿಪೋ ಮುತ್ತಿಗೆ

ವಿದ್ಯಾಗಿರಿ ಹಾಸ್ಟೆಲ್‌ಗಳು ಸೇರಿ ವಿವಿಧ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಒತ್ತಾಯ; ಡಿಪೋ ವ್ಯವಸ್ಥಾಪಕರ ಲಿಖಿತ ಭರವಸೆ ಬಳಿಕ ಪ್ರತಿಭಟನೆ ವಾಪಸ್

ದೇವದುರ್ಗ: ತಾಲೂಕಿನ ವಿದ್ಯಾರ್ಥಿಗಳಿಗೆ ಶಾಶ್ವತ ಹಾಗೂ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (SFI) ದೇವದುರ್ಗ ತಾಲೂಕು ಸಮಿತಿಯ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ನ.19ರಂದು ದೇವದುರ್ಗ ಸಾರಿಗೆ ಡಿಪೋಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ತಾಲೂಕಿನ ವಿದ್ಯಾಗಿರಿ ಪ್ರದೇಶದಲ್ಲಿರುವ ಸರ್ಕಾರಿ ಹಾಸ್ಟೆಲ್‌ಗಳು, ವಸತಿ ಶಾಲೆಗಳು ಹಾಗೂ ಮುಂಡರಗಿ, ಪರಪುರ, ಗಾಜಲದಿನ್ನಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ತಾಲೂಕಿನ ಬಹುತೇಕ ವಿದ್ಯಾರ್ಥಿಗಳು ಬಡ ರೈತರು, ಕೂಲಿ ಕಾರ್ಮಿಕರು, ದಲಿತ ಹಾಗೂ ಹಿಂದುಳಿದ ವರ್ಗಗಳ ಕುಟುಂಬಗಳಿಂದ ಬಂದವರಾಗಿದ್ದು, ಶಿಕ್ಷಣಕ್ಕಾಗಿ ಸರ್ಕಾರಿ ಬಸ್‌ಗಳನ್ನೇ ಅವಲಂಬಿಸಿದ್ದಾರೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ಸಾರಿಗೆ ವ್ಯವಸ್ಥೆ ಇಲ್ಲದ ಕಾರಣ ಶಾಲಾ-ಕಾಲೇಜುಗಳಿಗೆ ತೆರಳಲು ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು SFI ಆರೋಪಿಸಿದೆ.

ವಿದ್ಯಾಗಿರಿ ಪ್ರದೇಶದಲ್ಲಿ ಸರ್ಕಾರಿ ಹಾಸ್ಟೆಲ್‌ಗಳು, ವಸತಿ ಶಾಲೆಗಳು ಹಾಗೂ ಕಾಲೇಜುಗಳಿದ್ದು, ನೂರಾರು ವಿದ್ಯಾರ್ಥಿಗಳು ಪ್ರತಿದಿನ ಸುಮಾರು 3ರಿಂದ 5 ಕಿ.ಮೀ. ನಡೆದುಕೊಂಡು ಪಟ್ಟಣಕ್ಕೆ ಬರಬೇಕಾದ ಪರಿಸ್ಥಿತಿ ಇದೆ. ಮಳೆ, ಬಿಸಿಲು, ಚಳಿ ಎನ್ನದೆ ನಡೆದುಕೊಂಡು ಬರಬೇಕಾಗಿದ್ದು, ಸಂಜೆ ವೇಳೆಯೂ ಬಸ್ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳು, ವಿಶೇಷವಾಗಿ ವಿದ್ಯಾರ್ಥಿನಿಯರು ಸುರಕ್ಷತೆಯ ಆತಂಕ ಎದುರಿಸುತ್ತಿದ್ದಾರೆ ಎಂದು ಸಂಘಟನೆ ತಿಳಿಸಿದೆ.

ಪರಪುರ, ಮುಂಡರಗಿ ಹಾಗೂ ಗಾಜಲದಿನ್ನಿ ಗ್ರಾಮಗಳಲ್ಲಿ ಬೆಳಗಿನ ಸಮಯ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ತಡವಾಗಿ ತಲುಪುತ್ತಿದ್ದಾರೆ. ಸಂಜೆ ಬಸ್‌ಗಾಗಿ ಗಂಟೆಗಟ್ಟಲೆ ಕಾಯಬೇಕಾಗಿದ್ದು, ಅನಿವಾರ್ಯವಾಗಿ ಆಟೋ ಹಾಗೂ ಖಾಸಗಿ ವಾಹನಗಳನ್ನು ಅವಲಂಬಿಸಿ ದಿನಕ್ಕೆ ₹80ರಿಂದ ₹100ವರೆಗೆ ಖರ್ಚು ಮಾಡುತ್ತಿದ್ದಾರೆ. ಇದು ಬಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಆರ್ಥಿಕ ಹೊರೆಯಾಗುತ್ತಿದೆ ಎಂದು SFI ಮುಖಂಡರು ಹೇಳಿದರು.

ಈ ಹಿಂದೆ ಹೋರಾಟ ನಡೆಸಿದ ಬಳಿಕ ಕೆಲ ದಿನಗಳ ಕಾಲ ಬಸ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಆದರೆ ನಂತರ ಯಾವುದೇ ಸ್ಪಷ್ಟ ಕಾರಣ ನೀಡದೆ ಬಸ್ ಸಂಚಾರ ಸ್ಥಗಿತಗೊಂಡಿರುವುದರಿಂದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

SFI ಪ್ರಮುಖ ಬೇಡಿಕೆಗಳು

- ವಿದ್ಯಾಗಿರಿ ಪ್ರದೇಶದ ಹ

ಬಸ್ ಸೌಲಭ್ಯ ಕಲ್ಪಿಸುವುದು, ಹಗಲು ವೇಳೆಯ ಮಾರ್ಗಗಳಲ್ಲಿ ಬಸ್ ಸಂಚಾರವನ್ನು ಕ್ರಮಬದ್ಧಗೊಳಿಸುವುದು ಹಾಗೂ ಕೊನೆಯ ಟ್ರಿಪ್‌ಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಲಾಗಿದೆ. ಬಸ್ ನಿಲ್ದಾಣದಲ್ಲಿ ಶಿಸ್ತು ಮತ್ತು ಕಾರ್ಯಾಚರಣೆ ಸುಧಾರಿಸುವುದರ ಜೊತೆಗೆ ಶಾಲಾ-ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಬಸ್ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಡಿಪೋ ವ್ಯವಸ್ಥಾಪಕರ ಸಹಿ ಹಾಗೂ ಮುದ್ರೆಯಿರುವ ಟಿಪ್ಪಣಿಯಲ್ಲಿ ತಿಳಿಸಲಾಗಿದೆ.

ಪ್ರತಿಭಟನೆಯಲ್ಲಿ ಮುಖಂಡರು ಭಾಗಿ

ಪ್ರತಿಭಟನೆಯಲ್ಲಿ SFI ತಾಲೂಕು ಅಧ್ಯಕ್ಷೆ ಭಾಷಾ ಶ್ಯಾನೇರ್, ಕಾರ್ಯದರ್ಶಿ ಸಂತೋಷ ತ್ಯಾಪ್ಲಿ, ಉಪಾಧ್ಯಕ್ಷರಾದ ಬಾಬು ಶ್ಯಾನೇರ್, ಲಕ್ಷ್ಮಣ ಪರಪುರ, ಜಿಲ್ಲಾ ಅಧ್ಯಕ್ಷ ಮಹಾಲಿಂಗ್ ದೊಡ್ಡಮನಿ, ಜಿಲ್ಲಾ ಕಾರ್ಯದರ್ಶಿ ಪವನ್ ಕಮದಳ, ಸಿದ್ದೇಶ್ ಮುಂಡರಗಿ, ವಿದ್ಯಾರ್ಥಿಗಳಾದ ತೇಜಸ್ವಿನಿ, ಶಿಲ್ಪಾ, ಮೋನಿಕಾ, ಅನಿಲಕುಮಾರ್, ಪ್ರಜ್ವಲ್, ಶಿವರಾಜ್, ರಾಜ್ಯ ಕಾರ್ಮಿಕ ಮುಖಂಡ ಶಬ್ಬೀರ್ ಜಾಲಹಳ್ಳಿ, DYFI ಜಿಲ್ಲಾ ಅಧ್ಯಕ್ಷ ರಾಜು ನಾಯಕ, ತಾಲೂಕು ಅಧ್ಯಕ್ಷ ರಿಯಾಜ್, ಆರ್ತಿ, ಮಲ್ಲು, ವೆಂಕಟೇಶ್ ಸೇರಿದಂತೆ SFI ಹಾಗೂ DYFI ಪದಾಧಿಕಾರಿಗಳು ಉಪಸ್ಥಿತರಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

— Khaja Hussain

ದೇವದುರ್ಗದಲ್ಲಿ ಬಸ್ ಸೌಲಭ್ಯಕ್ಕಾಗಿ ಎಸ್‌ಎಫ್‌ಐ ಪ್ರತಿಭಟನೆ - ವಿದ್ಯಾಗಿರಿ ಹಾಸ್ಟೆಲ್, ಮುಂಡರಗಿ, ಪರಪುರ, ಗಾಜಲದಿನ್ನಿ, ಚಡಕಲಗುಡ್ಡ ಸೇರಿದಂತೆ ಪ್ರತಿ ಗ್ರಾಮಕ್ಕೂ ಶಾಶ್ವತ ಬಸ್‌ಗೆ ಆಗ್ರಹ - ಕೆಕೆಆರ್‌ಟಿಸಿ ಬಸ್ ಡಿಪೋಗೆ ಮುತ್ತಿಗೆ



ದೇವದುರ್ಗದಲ್ಲಿ ಬಸ್ ಸೌಲಭ್ಯಕ್ಕಾಗಿ ಎಸ್‌ಎಫ್‌ಐ ಪ್ರತಿಭಟನೆ - ಕೆಕೆಆರ್‌ಟಿಸಿ ಬಸ್ ಡಿಪೋಗೆ ಮುತ್ತಿಗೆ

ದೇವದುರ್ಗ: ತಾಲೂಕಿನ ವಿದ್ಯಾಗಿರಿ ಪ್ರದೇಶದ ಹಾಸ್ಟೆಲ್‌ಗಳಿಗೆ ಹಾಗೂ ಮುಂಡರಗಿ, ಪರಪುರ, ಗಾಜಲದಿನ್ನಿ, ಚಡಕಲಗುಡ್ಡ ಸೇರಿದಂತೆ ತಾಲೂಕಿನ ಪ್ರತಿಯೊಂದು ಗ್ರಾಮಕ್ಕೂ ಸಮರ್ಪಕ ಮತ್ತು ಶಾಶ್ವತ ಬಸ್ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಿ ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್‌ಎಫ್‌ಐ) ದೇವದುರ್ಗ ತಾಲೂಕು ಸಮಿತಿ ನೇತೃತ್ವದಲ್ಲಿ ಗುರುವಾರ ದೇವದುರ್ಗದ ಕೆಕೆಆರ್‌ಟಿಸಿ ಬಸ್ ಡಿಪೋಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಎಸ್‌ಎಫ್‌ಐ ರಾಯಚೂರು ಜಿಲ್ಲಾ ಅಧ್ಯಕ್ಷ ಮಹಾಲಿಂಗ ದೊಡ್ಡಮನಿ, ತಾಲೂಕಿನ ವಿದ್ಯಾರ್ಥಿಗಳಿಗೆ ಶಾಲಾ-ಕಾಲೇಜು ಸಮಯಕ್ಕೆ ಸರಿಯಾಗಿ ಬಸ್ ಬಿಡುವಂತೆ ಹಲವು ಬಾರಿ ಹೋರಾಟ ನಡೆಸಿ, ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳು ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸದ ಕಾರಣ ಇಂದು ಡಿಪೋ ಮುತ್ತಿಗೆ ಹಾಕುವ ಅನಿವಾರ್ಯತೆ ಎದುರಾಗಿದೆ. ನಮ್ಮನ್ನು ಪೊಲೀಸರು ಬಂಧಿಸಿದರೂ ಪರವಾಗಿಲ್ಲ, ವಿದ್ಯಾರ್ಥಿಗಳ ಬಸ್ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಸಿದರು.

ದೇವದುರ್ಗ ತಾಲೂಕು ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಇಲ್ಲಿನ ಬಹುತೇಕ ವಿದ್ಯಾರ್ಥಿಗಳು ಬಡ ರೈತರು, ಕೃಷಿ ಕೂಲಿ ಕಾರ್ಮಿಕರು, ದಲಿತ ಹಾಗೂ ಹಿಂದುಳಿದ ವರ್ಗಗಳ ಕುಟುಂಬಗಳಿಂದ ಬಂದವರಾಗಿದ್ದಾರೆ. ಇಂತಹ ಕುಟುಂಬಗಳ ಮಕ್ಕಳಿಗೆ ಉನ್ನತ ಶಿಕ್ಷಣ ಪಡೆಯಲು ಸರ್ಕಾರಿ ಬಸ್ ಸೌಲಭ್ಯವೇ ಪ್ರಮುಖ ಆಧಾರವಾಗಿದೆ. ಆದರೆ ಸಾರಿಗೆ ಇಲಾಖೆಯ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದ ಕಾರಣ ನೂರಾರು ವಿದ್ಯಾರ್ಥಿಗಳು ಪ್ರತಿನಿತ್ಯ ಸಂಚಾರ ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಹೊರವಲಯದಲ್ಲಿರುವ ವಿದ್ಯಾಗಿರಿ ಪ್ರದೇಶದಲ್ಲಿ ಸರ್ಕಾರಿ ಹಾಸ್ಟೆಲ್‌ಗಳು, ವಸತಿ ಶಾಲೆಗಳು ಹಾಗೂ ಕಾಲೇಜುಗಳಿದ್ದು, ನೂರಾರು ವಿದ್ಯಾರ್ಥಿಗಳು ವಾಸಿಸುತ್ತಿದ್ದಾರೆ. ಆದರೆ ಹಾಸ್ಟೆಲ್‌ಗಳವರೆಗೆ ಬಸ್ ಸೌಲಭ್ಯವಿಲ್ಲದ ಕಾರಣ ವಿದ್ಯಾರ್ಥಿಗಳು ಪ್ರತಿದಿನ 3ರಿಂದ 5 ಕಿ.ಮೀ. ದೂರ ನಡೆದುಕೊಂಡು ಪಟ್ಟಣಕ್ಕೆ ಬರಬೇಕಾದ ಪರಿಸ್ಥಿತಿ ಇದೆ. ಮಳೆ, ಬಿಸಿಲೆನ್ನದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ವಿದ್ಯಾರ್ಥಿನಿಯರು ಸಂಜೆ ವೇಳೆಯಲ್ಲಿ ಹಾಸ್ಟೆಲ್‌ಗಳಿಗೆ ಮರಳಲು ತೀವ್ರ ಸಮಸ್ಯೆ ಎದುರಿಸುತ್ತಿದ್ದು, ಅವರ ಸುರಕ್ಷತೆ ಮತ್ತು ಶಿಕ್ಷಣದ ಹಿತದೃಷ್ಟಿಯಿಂದ ಕೂಡಲೇ ಶಾಶ್ವತ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಮುಂಡರಗಿ, ಪರಪುರ, ಗಾಜಲದಿನ್ನಿ, ಲಿಂಗದಹಳ್ಳಿ, ಬಾಗೂರು, ಜಾಲಹಳ್ಳಿ ಹಾಗೂ ಗಬ್ಬೂರು ಹೋಬಳಿ ಸೇರಿದಂತೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಬೆಳಿಗ್ಗೆ ಸಮಯಕ್ಕೆ ಸರಿಯಾಗಿ ಬಸ್ ಸಿಗದೆ ಶಾಲಾ-ಕಾಲೇಜುಗಳಿಗೆ ತಡವಾಗಿ ತಲುಪುತ್ತಿದ್ದಾರೆ. ಸಂಜೆ ಬಸ್‌ಗಾಗಿ ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಅನಿವಾರ್ಯವಾಗಿ ಆಟೋ ಹಾಗೂ ಖಾಸಗಿ ವಾಹನಗಳನ್ನು ಅವಲಂಬಿಸಿ ದಿನಕ್ಕೆ 80ರಿಂದ 100 ರೂ. ಖರ್ಚು ಮಾಡಬೇಕಾಗಿದ್ದು, ಇದು ಬಡ ಪೋಷಕರಿಗೆ ಆರ್ಥಿಕ ಹೊರೆಯಾಗಿದೆ. ಹಲವು ಬಾರಿ ಮನವಿ ಸಲ್ಲಿಸಿದರೂ ಅಧಿಕಾರಿಗಳು ಶಾಶ್ವತ ಪರಿಹಾರ ಕಲ್ಪಿಸದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ವಿದ್ಯಾರ್ಥಿಗಳ ಶಿಕ್ಷಣದ ವಿಚಾರದಲ್ಲಿ ಸಾರಿಗೆ ಇಲಾಖೆ ನಿರ್ಲಕ್ಷ್ಯ ತೋರಬಾರದು ಎಂದು ಎಚ್ಚರಿಸಿದರು.

ನಂತರ ಮಾತನಾಡಿದ ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘದ ರಾಜ್ಯ ಕಾರ್ಯದರ್ಶಿ ಶಬ್ಬೀರ್ ಜಾಲಹಳ್ಳಿ, ಬಸ್ ಸೌಲಭ್ಯ ಎನ್ನುವುದು ಕೇವಲ ವಿದ್ಯಾರ್ಥಿಗಳ ಸಮಸ್ಯೆಯಲ್ಲ. ಇದು ಗ್ರಾಮೀಣ ಭಾಗದ ಪ್ರತಿಯೊಂದು ಕುಟುಂಬದ ಬದುಕಿಗೆ ಸಂಬಂಧಿಸಿದ ಮೂಲಭೂತ ಅಗತ್ಯವಾಗಿದೆ. ಕಟ್ಟಡ ನಿರ್ಮಾಣ ಕಾರ್ಮಿಕರು, ಕೃಷಿ ಕೂಲಿ ಕಾರ್ಮಿಕರು, ರೈತರು, ಮಹಿಳೆಯರು ಹಾಗೂ ಸಾಮಾನ್ಯ ಜನರು ತಮ್ಮ ದಿನನಿತ್ಯದ ಕೆಲಸ ಕಾರ್ಯಗಳಿಗಾಗಿ ದೇವದುರ್ಗ ಪಟ್ಟಣಕ್ಕೆ ಬರಬೇಕಾಗುತ್ತದೆ. ಆದರೆ ಗ್ರಾಮಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದ ಕಾರಣ ಜನರು ಖಾಸಗಿ ವಾಹನಗಳನ್ನು ಅವಲಂಬಿಸಿ ಹೆಚ್ಚಿನ ಹಣ ವ್ಯಯಿಸುವಂತಾಗಿದೆ ಎಂದು ಹೇಳಿದರು.

ಸರ್ಕಾರಿ ಸಾರಿಗೆ ವ್ಯವಸ್ಥೆ ಜನಸಾಮಾನ್ಯರ ಅನುಕೂಲಕ್ಕಾಗಿ ಇರಬೇಕೇ ಹೊರತು, ಜನರನ್ನು ಖಾಸಗಿ ವಾಹನಗಳ ಅವಲಂಬನೆಗೆ ತಳ್ಳುವಂತಿರಬಾರದು. ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ, ಕಾರ್ಮಿಕರು ಜೀವನೋಪಾಯಕ್ಕಾಗಿ ಪ್ರತಿನಿತ್ಯ ಪ್ರಯಾಣಿಸುತ್ತಾರೆ. ಬಸ್ ಸೌಲಭ್ಯವಿಲ್ಲದ ಕಾರಣ ಅವರ ಸಮಯ ಮತ್ತು ಹಣ ಎರಡೂ ವ್ಯರ್ಥವಾಗುತ್ತಿವೆ. ವಿಶೇಷವಾಗಿ ಗ್ರಾಮೀಣ ಪ್ರದೇಶದ ಬಡ ಕುಟುಂಬಗಳ ಮೇಲೆ ಇದರ ಪರಿಣಾಮ ಹೆಚ್ಚಾಗಿದೆ. ಸಾರಿಗೆ ಇಲಾಖೆ ಅಧಿಕಾರಿಗಳು ಜನರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಪ್ರತಿಯೊಂದು ಗ್ರಾಮಕ್ಕೂ ನಿಯಮಿತ ಬಸ್ ಸಂಚಾರ ಆರಂಭಿಸಬೇಕು. ವಿದ್ಯಾರ್ಥಿಗಳು ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ನಡೆಯುತ್ತಿರುವ ಈ ಹೋರಾಟಕ್ಕೆ ಕಾರ್ಮಿಕ ಸಂಘಟನೆಗಳ ಸಂಪೂರ್ಣ ಬೆಂಬಲವಿದೆ ಎಂದು ತಿಳಿಸಿದರು.

ಶ್ಯಾನೇರ್ ಮಾತನಾಡಿ, ವಿದ್ಯಾಗಿರಿ ಹಾಸ್ಟೆಲ್‌ಗಳಿಗೆ ಬೆಳಿಗ್ಗೆ ಮತ್ತು ಸಂಜೆ ಶಾಶ್ವತ ಬಸ್ ವ್ಯವಸ್ಥೆ ಕಲ್ಪಿಸಬೇಕು. ದೇವದುರ್ಗದಿಂದ ಮುಂಡರಗಿ ಮಾರ್ಗವಾಗಿ ಮಧ್ಯಾಹ್ನ 12:30 ಹಾಗೂ 1:45ಕ್ಕೆ ಬಸ್ ಸಂಚಾರ ಆರಂಭಿಸಬೇಕು. ಪರಪುರ ಗ್ರಾಮಕ್ಕೆ ಬೆಳಿಗ್ಗೆ 6:30ಕ್ಕೆ ಮತ್ತು ಸಂಜೆ 4:30ಕ್ಕೆ, ಗಾಜಲದಿನ್ನಿ ಗ್ರಾಮಕ್ಕೆ ಬೆಳಿಗ್ಗೆ 7 ಗಂಟೆಗೆ ಹಾಗೂ ಸಂಜೆ 4:30ಕ್ಕೆ ಬಸ್ ಬಿಡಬೇಕು. ಗಲಗ ವ್ಯಾಪ್ತಿಯ ಚಡಕಲಗುಡ್ಡ ಗ್ರಾಮಕ್ಕೂ ಬಸ್ ಸೌಲಭ್ಯ ಕಲ್ಪಿಸಬೇಕು. ತಿಂಥಣಿ ಬ್ರಿಜ್‌ನಿಂದ ದೇವದುರ್ಗ ಮಾರ್ಗವಾಗಿ ಸಂಜೆ 4:30, 5:30 ಹಾಗೂ 6:30ಕ್ಕೆ ಬಸ್ ಸಂಚಾರ ಆರಂಭಿಸಬೇಕು. ಕೋವಿಡ್‌ಗೂ ಮುನ್ನ ಜಾಲಹಳ್ಳಿ ಹೋಬಳಿಯಲ್ಲಿ ಇದ್ದ ಬಸ್ ಸಂಚಾರವನ್ನು ಪುನರಾರಂಭಿಸಬೇಕು. ತಾಲೂಕಿನ ಪ್ರತಿಯೊಂದು ಹಳ್ಳಿಗೂ ನಿಯಮಿತ ಬಸ್ ಸೌಲಭ್ಯ ಕಲ್ಪಿಸುವುದರ ಜೊತೆಗೆ ವಿದ್ಯಾರ್ಥಿಗಳ ಬಸ್ ಪಾಸ್ ಸೌಲಭ್ಯ ಸರಳಗೊಳಿಸಿ, ಪರೀಕ್ಷಾ ಸಮಯದಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸಬೇಕು ಎಂದು ಒತ್ತಾಯಿಸಿದರು.

ಇದು ಕೇವಲ ಬಸ್‌ಗಾಗಿ ನಡೆಯುತ್ತಿರುವ ಹೋರಾಟವಲ್ಲ; ವಿದ್ಯಾರ್ಥಿಗಳ ಶಿಕ್ಷಣದ ಹಕ್ಕು, ಕಾರ್ಮಿಕರ ಬದುಕು ಹಾಗೂ ಗ್ರಾಮೀಣ ಜನರ ಸಂಚಾರದ ಹಕ್ಕಿಗಾಗಿ ನಡೆಯುತ್ತಿರುವ ಹೋರಾಟವಾಗಿದೆ. ಬಸ್ ಸೌಲಭ್ಯವಿಲ್ಲದೆ ಒಬ್ಬ ವಿದ್ಯಾರ್ಥಿಯೂ ಶಿಕ್ಷಣದಿಂದ ವಂಚಿತನಾಗಬಾರದು. ಸಾರಿಗೆ ಇಲಾಖೆ ಅಧಿಕಾರಿಗಳು ಕೂಡಲೇ ಎಲ್ಲ ಬೇಡಿಕೆಗಳನ್ನು ಈಡೇರಿಸಿ ಲಿಖಿತ ಭರವಸೆ ನೀಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಎಸ್‌ಎಫ್‌ಐ ದೇವದುರ್ಗ ತಾಲೂಕು ಸಮಿತಿ ಕಾರ್ಯದರ್ಶಿ ಸಂತೋಷ್ ತ್ಯಾಪ್ಲಿ, ಉಪಾಧ್ಯಕ್ಷ ಬಾಬು ಶ್ಯಾನೇರ್, ಪದಾಧಿಕಾರಿ ಸಿದ್ದು ಮುಂಡರಗಿ, ಡಿವೈಎಫ್‌ಐ ಮುಖಂಡ ರಾಜು ನಾಯಕ, ಶಿವು ನಡಿಗೇರ, ವೆಂಕಟೇಶ್, ರಿಯಾಜ್ ಆರ್ತಿ, ಮುಕ್ಕನಗೌಡ, ವಿದ್ಯಾರ್ಥಿಗಳು, ಕಾರ್ಮಿಕ ಸಂಘಟನೆಯ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿದ್ದರು.

— Ningappa

ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ತಾಲ್ಲೂಕು ಬದಲಾವಣೆ ಕುರಿತು ನ.24ರಂದು ಗ್ರಾಮಸಭೆ



ದೇವದುರ್ಗ ಬ್ರೇಕಿಂಗ್ ನ್ಯೂಸ್

ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ತಾಲ್ಲೂಕು ಬದಲಾವಣೆ ಕುರಿತು ನ.24ರಂದು ಗ್ರಾಮಸಭೆ

ಅರಕೇರಾ ತಾಲ್ಲೂಕಿನಲ್ಲಿ ಮುಂದುವರಿಸುವ ಅಥವಾ ದೇವದುರ್ಗ ತಾಲ್ಲೂಕಿಗೆ ಸೇರ್ಪಡೆ ಮಾಡುವ ಕುರಿತು ಗ್ರಾಮಸ್ಥರ ಅಭಿಪ್ರಾಯ ಸಂಗ್ರಹ

ಅರಕೇರಾ: ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಗ್ರಾಮಗಳನ್ನು ಅರಕೇರಾ ತಾಲ್ಲೂಕಿನಲ್ಲಿ ಮುಂದುವರಿಸಬೇಕೇ ಅಥವಾ ದೇವದುರ್ಗ ತಾಲ್ಲೂಕಿಗೆ ಸೇರ್ಪಡೆ ಮಾಡಬೇಕೇ ಎಂಬ ಕುರಿತು ಗ್ರಾಮಸ್ಥರ ಅಭಿಪ್ರಾಯ ಸಂಗ್ರಹಿಸಲು ನವೆಂಬರ್ 24ರಂದು ಗ್ರಾಮಸಭೆ ಆಯೋಜಿಸಲಾಗಿದೆ.

ಅರಕೇರಾ ತಾಲ್ಲೂಕು ತಹಶೀಲ್ದಾರ್ ಕಾರ್ಯಾಲಯದಿಂದ ನವೆಂಬರ್ 19ರಂದು ಹೊರಡಿಸಿರುವ ಸೂಚನಾ ಪತ್ರದ ಪ್ರಕಾರ, ನವೆಂಬರ್ 24ರಂದು ಬೆಳಿಗ್ಗೆ 11 ಗಂಟೆಗೆ ರಾಮದುರ್ಗ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಗ್ರಾಮಸಭೆ ನಡೆಯಲಿದೆ.

ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ನವೆಂಬರ್ 12ರಂದು ಸ್ವೀಕೃತವಾದ ಪತ್ರದ ನಿರ್ದೇಶನದಂತೆ, ಗ್ರೇಡ್-2 ತಹಶೀಲ್ದಾರ್ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಯಲಿದೆ.

ವ್ಯಾಪ್ತಿಯ ಗ್ರಾಮಸ್ಥರು ಸಭೆಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ತಿಳಿಸಬೇಕು ಎಂದು ತಹಶೀಲ್ದಾರ್ ಕಾರ್ಯಾಲಯದ ಸೂಚನಾ ಪತ್ರದಲ್ಲಿ ಕೋರಲಾಗಿದೆ.

ವರದಿ ಖಾಜಾ ಹುಸೇನ್ ಬಾಬಾ

ಜಾಲಹಳ್ಳಿ

— Khaja Hussain

LOCAL

ಬೀದರ ಜಿಲ್ಲಾ ಪೊಲೀಸ್ ಭಾಲ್ಕಿ ಗ್ರಾಮೀಣ ಪೊಲೀಸ್ ನಿಂದ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ



ಬೀದರ ಜಿಲ್ಲಾ ಪೊಲೀಸ್ ಅಧಿಕಾರಿ ಪ್ರದೀಪ್ ಗುಂಟಿ, ಐ.ಪಿ.ಎಸ್., ತಮ್ಮ ನಿರ್ದೇಶನದಂತೆ ಭಾಲ್ಕಿ ಗ್ರಾಮೀಣ ಪೊಲೀಸ್ ಠಾಣೆಯ ಪಿ.ಎಸ್.ಐ ಶ್ರೀ ಪ್ರಭಾಕರ ಪಾಟೀಲರನ್ನು ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿರುವ ಕಬ್ಬಿನ ಕಾರ್ಖಾನೆಗಳಿಗೆ ಕಬ್ಬಿನ್ನು ಸಾಗಿಸುವ ಲಾರಿ ಮತ್ತು ಟ್ರಾಕ್ಟರ್ ಚಾಲಕರಿಗೆ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ ನಡೆಸಲು ಸೂಚಿಸಿದರು.

ಕಾರ್ಯಕ್ರಮದಲ್ಲಿ ಚಾಲಕರಿಗೆ ರಾತ್ರಿಯ ಸಮಯದಲ್ಲಿ ತಮ್ಮ ವಾಹನಗಳ ಹಿಂದೆ ರೆಡಿಯಂ ಸ್ಟಿಕ್ಕರ್ ಅಳವಡಿಸಿ, ಹಿಂಬಾಲಿಸುವ ವಾಹನಗಳ ಚಾಲಕರಿಗೆ ಸ್ಪಷ್ಟವಾಗಿ ಕಾಣುವಂತೆ ಮಾಡುವಂತೆ, ದ್ವಿಚಕ್ರ ವಾಹನಗಳಿಗಾಗಿ ಹೆಲ್ಮೆಟ್ ಮತ್ತು ಕಾರು ಚಾಲಕರಿಗೆ ಸೀಟ್ ಬೆಲ್ಟ್ ಧರಿಸುವಂತೆ ಕಡ್ಡಾಯವಾಗಿ ತಿಳಿಸಲಾಯಿತು. ಭಾಲ್ಕಿ ಆರ್.ಟಿ.ಓ ಅಧಿಕಾರಿ ಹಾಗೂ ಸಿಬ್ಬಂದಿ ಸಹ ಜಾಗೃತಿ ಮೂಡಿಸುವಲ್ಲಿ ಭಾಗವಹಿಸಿದರು.

ಜಿಲ್ಲೆಯಲ್ಲಿ ಅಪಘಾತಗಳ ಪ್ರಮಾಣವನ್ನು ಕಡಿಮೆ ಮಾಡಲು ಬೀದರ ಜಿಲ್ಲಾ ಪೊಲೀಸ್ ನಿರಂತರ ಪ್ರಯತ್ನಗಳನ್ನು ನಡೆಸುತ್ತಿದೆ. ಈ ಜಾಗೃತಿ ಕಾರ್ಯಕ್ರಮವನ್ನು ಸ್ಥಳೀಯ ಜನರು ಪ್ರಶಂಸಿಸಿ, ಎಲ್ಲಾ ನಾಗರಿಕರು ಹಾಗೂ ಚಾಲಕರು ಸಹಕರಿಸುವಂತೆ ವಿನಂತಿ ಮಾಡಲಾಗಿದೆ.

— Basavaraj pujari

LOCAL

ಬೀದರ ಜಿಲ್ಲಾ ಪೊಲೀಸರಿಂದ ಮನ್ನಳ್ಳಿ ಗ್ರಾಮದ ಸಕ್ಕರೆ ಕಾರ್ಖಾನೆಯ ಮುಂದೆ ರೈತರ ಪ್ರತಿಭಟನೆಯಲ್ಲಿ ಶಾಂತಿ ಕಾಪಾಡಲಾಗಿದೆ



ಬೀದರ ಜಿಲ್ಲಾ ಪೊಲೀಸ್, ಮನ್ನಳ್ಳಿ ಪೊಲೀಸ್ ಠಾಣೆಯ ಅಧಿಕಾರಿಗಳು ರೈತರ ಬಾಂಧವರಿಂದ ಹಮ್ಮಿಕೊಂಡ ಪ್ರತಿಭಟನೆಯನ್ನು ಶಾಂತವಾಗಿ ನಿರ್ವಹಿಸಿ ಯಾವುದೇ ಅಹಿತಕರ ಘಟನೆಗಳಿಲ್ಲದೆ ಶಾಂತಿ ಕಾಪಾಡಿದರು.

ಮಾನ್ಯ ಪ್ರದೀಪ್ ಗುಂಟಿ, ಐ.ಪಿ.ಎಸ್. ಪೊಲೀಸ್ ವರೀಷ್ಠಾಧಿಕಾರಿಗಳು, ಬೀದರ ಜಿಲ್ಲೆ ರವರ ನೇರ ನಿರ್ದೇಶನ ಮತ್ತು ಮಾರ್ಗದರ್ಶನದಂತೆ, ಮನ್ನಳ್ಳಿ ಗ್ರಾಮದ ಸಕ್ಕರೆ ಕಾರ್ಖಾನೆಯ ಮುಂದೆ ರೈತ ಬಾಂಧವರಿಂದ ಹಮ್ಮಿಕೊಂಡ ಪ್ರತಿಭಟನಾ ಬ/ಬ ಸಮಯಕ್ಕೆ ಬೀದರ ಉಪ-ವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಶ್ರೀ ದೂದ್ ಪೀರ್ ಹೆಚ್. ಮುಲ್ಲಾ ರವರ ನೇತೃತ್ವದಲ್ಲಿ ಬೀದರ ಗ್ರಾಮೀಣ ವೃತ್ತ ಸಿ.ಪಿ.ಐ ಜಿ.ಎಸ್ ಬಿರಾದಾರ, ಮನ್ನಳ್ಳಿ ಪೊಲೀಸ್ ಠಾಣೆಯ ಪಿ.ಎಸ್.ಐ ಪಿ.ಎಸ್.ಐ ಶ್ರೀ ಮಹೇಂದ್ರ ಕುಮಾರ, ರವರು ತಮ್ಮ ಠಾಣೆಯ ಅಧಿಕಾರಿ, ಸಿಬ್ಬಂದಿ ರವರೊಂದಿಗೆ ಯಾವುದೇ ರೀತಿಯ ಅಹಿತಕರ ಘಟನೆ ಜರುಗದಂತೆ ಸೂಕ್ತ ಕಾನೂನು ಸುವ್ಯವಸ್ಥೆ ಕಾಪಾಡಿಕೊಂಡಿದ್ದು, ಬ/ಬ ಕರ್ತವ್ಯವನ್ನು ಯಶಸ್ವಿಯಾಗಿ ನಿರ್ವಹಿಸಿರುತ್ತಾರೆ.

ಸಿಬ್ಬಂದಿಯವರು ತಮ್ಮ ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕಾನೂನು ಸೂ ವ್ಯವಸ್ಥೆ ಕಾಡುವಲ್ಲಿ ಅಚ್ಚು ಕಟ್ಟಾಗಿ ಬ/ಬ ಕರ್ತವ್ಯ ನಿರ್ವಹಿಸಿ ಯಾವುದೇ ರೀತಿ ಅಹಿತಕರ ಘಟನೆ ಜರುಗದಂತೆ ನೋಡಿಕೊಂಡ ಪೊಲೀಸ್ ಅಧಿಕಾರಿ, ಸಿಬ

ಪ್ರಧಾನ ಕಾರ್ಯದರ್ಶಿ ಡಾ. ಎಂ.ಎಸ್. ಶಿರೋಮಣಿ, ಜಿಲ್ಲಾಧ್ಯಕ್ಷ ರವೀಂದ್ರ ಕೊಳ್ಳೂರ, ರಾಜ್ಯ ಕಾರ್ಯಕಾರಿ ಸದಸ್ಯ ದಿಲೀಪ ಭಂಗೂರೆ, ಶಮಶೊದ್ದಿನ, ಶುಜಾವುದ್ದಿನ, ಗೌಸಖಾನ್, ಬಾಲಾಜಿ ಔರಾದಕರ್, ರಾಜಕುಮಾರ ಮಾಳಗೆ, ದಶರಥ, ಝರೆಪ್ಪಾ ಮುಂತಾದವರು ಮನವಿ ಸಲ್ಲಿಸಿದ್ದಾರೆ.

— Basavaraj pujari

ಜನರ ನಡಿಗೆ – ಮಕ್ಕಳ ಕಲಿಕೆಯ ಕಡೆಗೆ’ ಗಣಿತ ಚಟುವಟಿಕೆ ಕಾರ್ಯಕ್ರಮ



ಹರಿಹರ, ನವೆಂಬರ್ 19: ಹರಿಹರ ತಾಲ್ಲೂಕಿನ ಕೆ. ಬೇವಿನಹಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಅಕ್ಷರ ಫೌಂಡೇಶನ್ ಮತ್ತು ಸ್ಥಳೀಯ ಸಮುದಾಯದ ಸಹಯೋಗದಲ್ಲಿ ‘ಊರ ಜನರ ನಡಿಗೆ – ಮಕ್ಕಳ ಕಲಿಕೆಯ ಕಡೆಗೆ’ ಎಂಬ ಸಮುದಾಯ ಸಹಭಾಗಿತ್ವದ ಗಣಿತ ಚಟುವಟಿಕೆ ಕಾರ್ಯಕ್ರಮ ನಡೆಯಿತು. ಮಕ್ಕಳಲ್ಲಿ ಗಣಿತದ ಬಗ್ಗೆ ಆಸಕ್ತಿ ಮೂಡಿಸುವುದು, ಕಲಿಕೆಯನ್ನು ಸರಳ ಮತ್ತು ಆಸಕ್ತಿದಾಯಕವಾಗಿಸುವುದು ಹಾಗೂ ಪೋಷಕರಲ್ಲಿ ಶೈಕ್ಷಣಿಕ ಜಾಗೃತಿ ತರುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು. ಇದಕ್ಕಾಗಿ ವಿವಿಧ ಗಣಿತ ಚಟುವಟಿಕೆಗಳು ಮತ್ತು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಗ್ರಾಮದ ಯುವತಿಯರು, ಮಹಿಳೆಯರು, ಪೋಷಕರು ಸೇರಿ ಸುಮಾರು 53 ಜನರು ಉತ್ಸಾಹದಿಂದ ಭಾಗವಹಿಸಿದರು.

ಮಾತನಾಡಿ, ಮಹಿಳಾ ಸಬಲೀಕರಣ ಮತ್ತು ಸ್ತ್ರೀಯರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ಮಹಿಳೆಯರು ಮತ್ತು ಯುವತಿಯರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕವಾದ ಅರಿವು ಮೂಡಿಸುವ ಇಂತಹ ಕಾರ್ಯಕ್ರಮಗಳು ಅರ್ಥಪೂರ್ಣವಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಮಕ್ಕಳ ಕಲಿಕೆಯ ಜವಾಬ್ದಾರಿಯಲ್ಲಿ ಗ್ರಾಮದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ ಅಕ್ಷರ ಫೌಂಡೇಶನ್ ಜಿಲ್ಲಾ ಸಂಯೋಜಕ ರಘು, ಗಣಿತ ಕಲಿಕೆಯನ್ನು ಆಟ, ಚಟುವಟಿಕೆ ಮತ್ತು ದೈನಂದಿನ ಜೀವನದ ಅನುಭವಗಳೊಂದಿಗೆ ಸಂಯೋಜಿಸಿದರೆ ಮಕ್ಕಳ ಅರಿವು ಹೆಚ್ಚಾಗುತ್ತದೆ ಎಂದರು. ಪೋಷಕರು ಮತ್ತು ಸಮುದಾಯದ ಸದಸ್ಯರು ಮಕ್ಕಳ ಕಲಿಕೆಗೆ ನಿರಂತರ ಪ್ರೇರಣೆ ನೀಡಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡ ಎಲ್ಲರಿಗೂ ಅಭಿನಂದನಾ ಪ್ರಮಾಣಪತ್ರ ವಿತರಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ನೀಡಿ ಪ್ರೋತ್ಸಾಹಿಸಲಾಯಿತು. ಶಾಲಾ ಶಿಕ್ಷಕರಾದ ಮಂಗಳಾ, ಕೆ. ಎಸ್, ಇಂದ್ರಮ್ಮ,ಕರಿಬಸಪ್ಪ, ಎ. ವಿ.ದೀಪಾ. ಸಿ,ಅಮಿತ್, ಮಮತಾ, ಸೌಮ್ಯ. ಜಿ. ಸಿ. ರೂಪ, ಮಮತಾ, ಎನ್.ಗ್ರಾಮ ಪಂಚಾಯಿತಿ ಸದಸ್ಯರು, ಮಹಿಳೆಯರು, ಯುವತಿಯರು, ಶಿಕ್ಷಕರು, ಪೋಷಕರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

— Viswanatha D R

SPORTS

58 ವರ್ಷಗಳ ನಂತರ ವೆಲ್ಲಿಂಗ್ಟನ್‌ನಲ್ಲಿ ಭಾರತ ಕ್ರಿಕೆಟ್ ತಂಡದ ಗೆಲುವಿನ ಹುಡುಕಾಟ



ವೆಲ್ಲಿಂಗ್ಟನ್, ನ್ಯೂಜಿಲೆಂಡ್‌ನಲ್ಲಿ ಬೇಸಿನ್ ರಿಸರ್ವ್ ಮೈದಾನದಲ್ಲಿ ಭಾರತ ಕ್ರಿಕೆಟ್ ತಂಡವು ಟೆಸ್ಟ್ ಪಂದ್ಯಕ್ಕೆ ಹಾಜರಾಗಿದೆ. 1968ರಿಂದ ಈ ಮೈದಾನದಲ್ಲಿ ಭಾರತ ತಂಡವು ಯಾವುದೇ ಟೆಸ್ಟ್ ಗೆಲುವು ಸಾಧಿಸಿಲ್ಲ, 58 ವರ್ಷಗಳ ದೀರ್ಘ ಗೆಲುವಿನ ಕೊರತೆಯನ್ನು ಮುರಿಯುವ ಉದ್ದೇಶದಿಂದ ಈ ಪಂದ್ಯವನ್ನು ಎದುರಿಸುತ್ತಿದೆ. ಸೋಲಿನ ಅನುಭವವನ್ನು ತೀರಿಸಲು ಈ ಪಂದ್ಯವು ಪ್ರಮುಖ ಅವಕಾಶವಾಗಿ ಕಾಣುತ್ತಿದೆ. ಹಿಂದಿನ ಸೋಲಿನ ನಂತರ ತಂಡದ ಮನೋಬಲವನ್ನು ಪುನಃಸ್ಥಾಪಿಸುವುದು ಮತ್ತು ಗೆಲುವು ಸಾಧಿಸುವುದು ಮುಖ್ಯ ಗುರಿಯಾಗಿದೆ.

ಈ ಪಂದ್ಯದಲ್ಲಿ ಭಾರತ ತಂಡವು ಉತ್ತಮ ಪ್ರದರ್ಶನ ನೀಡುವ ಮೂಲಕ ದೀರ್ಘಕಾಲದ ಗೆಲುವಿನ ಕೊರತೆಯನ್ನು ಮುಕ್ತಗೊಳಿಸಿ, ಭವಿಷ್ಯದ ಟೆಸ್ಟ್ ಸರಣಿಗಳಿಗೆ ಆತ್ಮವಿಶ್ವಾಸವನ್ನು ಹೆಚ್ಚಿಸುವ ನಿರೀಕ್ಷೆ ಇದೆ.

— Ganesh S